# ಕನ್ನಡ ಪೋಸ್ಟ್

ಇದು ಸುದ್ದಿ ವಿಳಾಸ

ಸಂಪಾದಕ : ಮಂಜು ಬನವಾಸೆ

KANNADA POST

ಕನ್ನಡ ದಿನ ಪತ್ರಿಕೆ Kannada Daily

ಹಾಸನ E-mail : kannadapostnews@gmail.com / ಕನ್ನಡ post Price: ₹1

Vol.No.01 | Issue. 220 | Pages. 2 | Date: 11-07-2025, FRIDAY RNI NO: KARKAN/2024/89601

ಸಂಪುಟ : 01 - ಸಂಚಿಕೆ : 220 - ಪುಟಗಳು : 2 - 11 ಜುಲೈ 2025 ಶುಕ್ರವಾರ Ph: 8762954248 ದರ : ₹1



# ಹೃದಯಾಘಾತ: ಐಸಿಎಂಆರ್ ಅಧ್ಯಯನಕ್ಕೆ ಸಂಸದರ ಮನವಿ

## ಆರೋಗ್ಯ ಇಲಾಖೆ ರಾಜ್ಯ ಸಚಿವರ ಭೇಟಿ | ವಸ್ತುಸ್ಥಿತಿ ಮನವರಿಕೆ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಜಿಲ್ಲೆಯಲ್ಲಿ ಸಂಭವಿಸುತ್ತಿರುವ ಹಠಾತ್ ಹೃದಯಾಘಾತ ಪ್ರಕರಣಗಳನ್ನು ಗಂಭೀರವಾಗಿ ಪರಿಗಣಿಸಿರುವ ಸಂಸದ ಶ್ರೇಯಸ್ ಪಟೇಲ್ ಅವರು ಭಾರತೀಯ ವೈದ್ಯಕೀಯ ಮಂಡಳಿ (ಐಸಿಎಂಆರ್) ಯಿಂದ ವಿಶೇಷ ಅಧ್ಯಯನ ನಡೆಸಬೇಕು ಹಾಗೂ ಕೆಲವು ತ್ವರಿತ ಕ್ರಮ ಕೈಗೊಳ್ಳಬೇಕು ಎಂದು ಕೇಂದ್ರ ಸರ್ಕಾರಕ್ಕೆ ಮನವಿ ಸಲ್ಲಿಸಿದ್ದಾರೆ.

ನವದೆಹಲಿ ಪ್ರವಾಸದಲ್ಲಿರುವ ಅವರು ಗುರುವಾರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ರಾಜ್ಯ ಸಚಿವೆ ಅನುಪ್ರಿಯ ಪಟೇಲ್ ಅವರನ್ನು ಭೇಟಿಯಾಗಿ ಈ ಕುರಿತು ಮನವಿ ಸಲ್ಲಿಸಿದರು. ಜಿಲ್ಲೆಯಲ್ಲಿ ಕಳೆದ ಹಲವು ದಿನಗಳಿಂದ ಹೃದಯಾಘಾತದಿಂದ ಸಾವುಗಳು ಸಂಭವಿಸುತ್ತಿವೆ. ಅದರಲ್ಲೂ ಶೇ. 35ರಷ್ಟು ಜನರು 40ಕ್ಕಿಂತ ಕಡಿಮೆ ವಯಸ್ಸಿನವರೇ ಇರುವುದು ಅತಂಕ ಮೂಡಿಸಿದೆ. ಕಳೆದ ಎರಡು ವರ್ಷಗಳಲ್ಲಿ ಜಿಲ್ಲೆಯಲ್ಲಿ 507 ಹೃದಯಾಘಾತ




ಪ್ರಕರಣ ಬೆಳಕಿಗೆ ಬಂದಿದ್ದು 140 ಜನರು ಮೃತಪಟ್ಟಿದ್ದಾರೆ. 20 ರಿಂದ 45 ವಯೋಮಾನದ ಒಳಗಿನವರು ಹಠಾತ್ ಹೃದಯಾಘಾತಕ್ಕೆ ಬಲಿಯಾಗುತ್ತಿರುವುದು ಕುಟುಂಬಗಳಿಗೆ ತುಂಬಲಾರದ ನಷ್ಟವುಂಟು ಮಾಡುತ್ತಿದೆ ಎಂದು ಸಂಸದರು ಮನವರಿಕೆ ಮಾಡಿದ್ದಾರೆ.

ರಾಜ್ಯದಲ್ಲಿ ಹೆಚ್ಚುತ್ತಿರುವ ಹೃದಯಾಘಾತ ಪ್ರಕರಣ ತಡೆಗೆ ಕೇಂದ್ರ ಆರೋಗ್ಯ ಇಲಾಖೆ ಕ್ರಮ ಕೈಗೊಳ್ಳಬೇಕೆಂದು ಮನವಿ ಸಲ್ಲಿಸಿದ ಅವರು, 15 ರಿಂದ 40 ವರ್ಷ ವಯಸ್ಸಿನ ಎಲ್ಲರಿಗೂ (ಮುಖ್ಯವಾಗಿ ಶಿಕ್ಷಣ ಸಂಸ್ಥೆಗಳು ಮತ್ತು ಕೈಗಾರಿಕಾ ಕೆಲಸದ ಸ್ಥಳಗಳಲ್ಲಿ) ಹೃದಯ ತಪಾಸಣೆ (ECG+stress test) ಕಡ್ಡಾಯಗೊಳಿಸಬೇಕು. ಹಠಾತ್ ಹೃದಯ ನಿಲುಗಡೆ ಪ್ರಕರಣಗಳ ರಾಷ್ಟ್ರೀಯ ಡಿಜಿಟಲ್ ದಾಖಲೆ ಪಟ್ಟಿ ದಾಖಲಿಸಿ ಆ ಮೂಲಕ ಮುನ್ನೆಚ್ಚರಿಕೆ ಕ್ರಮಗಳಿಗೆ ಅನುಕೂಲವಾಗುತ್ತದೆ. ಆಯುಷ್ಮಾನ್ ಭಾರತ್ ಆರೋಗ್ಯ ಮೂಲಸೌಕರ್ಯ ಮಿಷನ್ ಅಡಿಯಲ್ಲಿ ಹೃದಯ ತಪಾಸಣಾ ಸಂಚಾರಿ ವಾಹನಗಳನ್ನು ಪ್ರಾರಂಭಿಸಬೇಕು. ಕ್ರೀಡೆ ಮತ್ತು ಹೆಚ್ಚಿನ ಮಾನಸಿಕ ಒತ್ತಡದ ವೃತ್ತಿಗಳಲ್ಲಿ ಪಾಲ್ಗೊಳ್ಳುವ ಮೊದಲು ಹೃದಯ ತಪಾಸಣೆಗಾಗಿ ರಾಷ್ಟ್ರೀಯ ಮಾರ್ಗಸೂಚಿಗಳನ್ನು ಜಾರಿಗೆ ತರಬೇಕು ಎಂದು ಮನವಿ ಸಲ್ಲಿಸಿದರು.

ಕರ್ನಾಟಕ ಅದರಲ್ಲೂ ಹಾಸನದಲ್ಲಿ ಸಂಭವಿಸುತ್ತಿರುವ ಹೃದಯಾಘಾತ ಪ್ರಕರಣ ಕುರಿತು ಸಂಪೂರ್ಣ ಅಧ್ಯಯನ ನಡೆಸಲು ಭಾರತೀಯ ವೈದ್ಯಕೀಯ ಮಂಡಳಿಯಿಂದ ವಿಶೇಷ ಅಧ್ಯಯನಕ್ಕೆ ಆದೇಶಿಸಬೇಕು ಎಂದು ಕೋರಿದರು.

### ವರದಿ ಸಲ್ಲಿಸಿದ ತಾಂತ್ರಿಕ ಸಮಿತಿ

ಬೆಂಗಳೂರು: ಹಾಸನ ಜಿಲ್ಲೆಯಲ್ಲಿ ಹೃದಯಾಘಾತ ಹೆಚ್ಚಾಗುತ್ತಿರುವ ಕುರಿತಂತೆ ತಾಂತ್ರಿಕ ಸಮಿತಿ ಸದಸ್ಯರು ಅಧ್ಯಯನ ವರದಿಯನ್ನು ಗುರುವಾರ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಅವರಿಗೆ ಸಲ್ಲಿಸಿದರು.

ಸಚಿವ ದಿನೇಶ್ ಗುಂಡೂರಾವ್ ಸುದ್ದಿಗಾರರೊಂದಿಗೆ ಮಾತನಾಡಿ, ಹಾಸನದಲ್ಲಿ ಜನರು ಹೃದಯಾಘಾತದಿಂದ ಸಾವಿಗೀಡಾಗಿರುವುದಕ್ಕೆ ಕಾರಣ ಮಧುಮೇಹ, ಮದ್ಯಪಾನ ಮತ್ತು ಕುಟುಂಬದ ಹಿನ್ನೆಲೆ ಅಂತ ವರದಿ ಮೂಲಕ ತಿಳಿದುಬಂದಿದೆ ಎಂದು ಹೇಳಿದರು.

ಮೇ ಮತ್ತು ಜೂನ್ ತಿಂಗಳಲ್ಲಿ ಜಿಲ್ಲೆಯಲ್ಲಿ ಹೃದಯಾಘಾತದಿಂದ ಮೃತಪಟ್ಟ 24 ಜನರ ಸಾವಿನ ಬಗ್ಗೆ ತಜ್ಞರು ನೀಡಿದ ಅಧ್ಯಯನ ವರದಿಯಲ್ಲಿ ನಾಲ್ವರು ಹೃದಯ ಸ್ತಂಭನದಿಂದ ಮೃತಪಟ್ಟಿಲ್ಲವೆಂದು ಇದೆ. ಇನ್ನುಳಿದ 20 ಜನರಲ್ಲಿ 10 ಜನರು ಹೃದಯಕ್ಕೆ ಸಂಬಂಧಿ ಸಮಸ್ಯೆಯಿಂದ ಮೃತಪಟ್ಟಿದ್ದಾರೆ. 10 ಜನರು ಹೃದಯಾಘಾತದಿಂದ ಮೃತಪಟ್ಟಿದ್ದಾರೆ ಎಂದು ಹೇಳಬಹುದು. ಮೃತಪಟ್ಟ 20 ಜನರಲ್ಲಿ 15 ಮಂದಿ 45 ವರ್ಷಕ್ಕಿಂತ ಕಡಿಮೆ ವಯಸ್ಸಿನವರಾಗಿದ್ದಾರೆ ಎಂದರು.


# ಪುಷ್ಪಗಿರಿ ಮಠದಲ್ಲಿ ಅರ್ಥಪೂರ್ಣ ಗುರು ಪೂರ್ಣಿಮೆ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಬೇಲೂರು: ತಾಲ್ಲೂಕಿನ ಪುಷ್ಪಗಿರಿ ಮಠದಲ್ಲಿ ಗುರುವಾರ ಶ್ರೀಮತಿ ಪ್ರಭ ರಾಜಶೇಖರ್ ಹಾಗೂ ಶಿವಗಂಗಾ ಕುಟುಂಬ ವರ್ಗದದಿಂದ ಗುರು ಪೂರ್ಣಿಮೆ ಮತ್ತು ಗುರು ವಂದನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

ಶ್ರೀ ಮಠದ ಸೋಮಶೇಖರ ಸ್ವಾಮೀಜಿ ಮಾತನಾಡಿ, ಎಲ್ಲಾ ವರ್ಗದ ಜನರನ್ನು ಆರ್ಥಿಕ, ಸಾಮಾಜಿಕ, ಶೈಕ್ಷಣಿಕ ಹಾಗೂ ಧಾರ್ಮಿಕವಾಗಿ ಸದೃಢರನ್ನಾಗಿಸುವ ದೃಷ್ಟಿಯಿಂದ ಪುಷ್ಪಗಿರಿ ಮಠದಿಂದ ಹತ್ತು ಹಲವು ಕಾರ್ಯಕ್ರಮ ಹಮ್ಮಿಕೊಳ್ಳಲಾಗುತ್ತಿದೆ ಎಂದರು.

ಧರ್ಮವನ್ನು ನಾವು ರಕ್ಷಿಸಿದ ಅದು ನಮ್ಮನ್ನು ಕಾಪಾಡುತ್ತದೆ. ಮಾತೃದೇವೋಭವ, ಪಿತೃದೇವೋಭವ, ಆಚಾರ್ಯ ದೇವೋಭವ, ವೃಕ್ಷ ದೇವೋಭವ, ರಾಷ್ಟ್ರ ದೇವೋಭವ ಎಂಬ ಪರಿಕಲ್ಪನೆಯಡಿ ಕೆಲಸ ಮಾಡುತ್ತಿದ್ದೇವೆ. ದೇಶದ ಐಕ್ಯತೆಯನ್ನು ಮೂಡಿಸಲು ಗ್ರಾಮೀಣ ಭಾಗದಿಂದ ನಗರಗಳ ವರೆಗೆ ಯಾವುದೇ ಜಾತಿ, ಮತ, ಪಂಥ ಬೇಧವಿಲ್ಲದೆ ಎಲ್ಲರಿಗೂ ಒಳಿತನ್ನೇ ಬಯಸುವ



ಬಸವಣ್ಣನವರ ವಾಣಿಯಂತೆ ಗುರುವರ್ಯರ ಮಾರ್ಗದರ್ಶನದಲ್ಲಿ ಸಾಗುತ್ತಿದ್ದೇವೆ ಎಂದರು.

ಗುರುವಿಗೆ ಭಾರತದಲ್ಲಿ ಮಹತ್ವದ ಸ್ಥಾನ ನೀಡಲಾಗಿದೆ. ದೇಶ ಅಭಿವೃದ್ಧಿ ಹೊಂದಲು ಸಂಸ್ಕಾರಯುತ ಮನಸ್ಸಿನಿಂದ ಮಾತ್ರ ಸಾಧ್ಯ. ಜೊತೆಗೆ ಮಕ್ಕಳಿಗೆ ಉತ್ತಮ ಸಂಸ್ಕಾರ ದೊರೆತರೆ ಮಾತ್ರ ದೇಶಕ್ಕೆ ಒಳ್ಳೆಯ ಪ್ರಜೆಯಾಗಲು ಸಾಧ್ಯ. ತಾಯಂದಿರು ತಮ್ಮ ಮಕ್ಕಳಿಗೆ ಸಂಸ್ಕಾರ ಕಲಿಸಿದರೆ ಬದುಕಿನಲ್ಲಿ ಎದುರಾಗುವ ಎಲ್ಲಾ ಸಮಸ್ಯೆಗಳನ್ನು ಸಮರ್ಥವಾಗಿ ಎದುರಿಸುವ ಶಕ್ತಿ ಬರುತ್ತದೆ. ಅದರಿಂದ ಸಂಸ್ಕಾರಯುತ ಸಮಾಜ ನಿರ್ಮಾಣವಾಗುವ ಜೊತೆಗೆ ರಾಷ್ಟ್ರದ ಅಭಿವೃದ್ಧಿ ಸಾಧ್ಯ ಎಂದರು.

ಪುಷ್ಪಗಿರಿ ಕ್ಷೇತ್ರದ ಕಾರ್ಯದರ್ಶಿ ಗ್ರಾನೈಟ್ ರಾಜಶೇಖರ್ ಮಾತನಾಡಿ, ಅನಾದಿ ಕಾಲದಿಂದಲೂ ಗುರುವನ್ನು ಗೌರವಿಸುವ ಸಂಸ್ಕೃತಿ ನಮ್ಮದಾಗಿದೆ. ಉತ್ತಮ ನಾಗರಿಕರಾಗಿ ಹಾಗು ಭವಿಷ್ಯ ಚೆನ್ನಾಗಿರಲು ಗುರುವಿನ ಆಶೀರ್ವಾದ ಬೇಕು. ಯಾವ ವ್ಯಕ್ತಿ ಸಮಾಜದಲ್ಲಿ ಮುಂದೆ ಬರಬೇಕಾದರೆ ಒಂದು ಕಾಣದ ಕೈ ಇರುತ್ತದೆ. ಅದೇ ಗುರುಗಳ ಮತ್ತು ಶರಣರ ಆಶೀರ್ವಾದ. ಉನ್ನತ ಸ್ಥಾನಕ್ಕೆ ಕೊಂಡೊಯ್ಯಲು ಅವರ ಆಶೀರ್ವಾದ ಅವಶ್ಯಕತೆ ಇರುತ್ತದೆ ಎಂದರು.

# ವೇತನಕ್ಕಾಗಿ ಅಂಗಲಾಚಿದ ನರೇಗಾ ಸಿಬ್ಬಂದಿ




ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಮಹಾತ್ಮ ಗಾಂಧಿ ಉದ್ಯೋಗ ಖಾತ್ರಿ ಯೋಜನೆಯಡಿ ಕೆಲಸ ಮಾಡುತ್ತಿರುವ ಹೊರ ಸಂಪನ್ಮೂಲ ನೌಕರರ ಆರು ತಿಂಗಳ ವೇತನ ಬಾಕಿಯಿದ್ದು ಶೀಘ್ರ ಬಿಡುಗಡೆ ಮಾಡಬೇಕೆಂದು ನರೇಗಾ ನೌಕರರ ಕ್ಷೇಮಾಭಿವೃದ್ಧಿ ಸಂಘದಿಂದ ರಾಜ್ಯ ಸರ್ಕಾರವನ್ನು ಆಗ್ರಹಿಸಲಾಯಿತು.

ಜಿಲ್ಲಾ ಪಂಚಾಯಿತಿ ಉಪಕಾರ್ಯದರ್ಶಿ ಮೂಲಕ ಗುರುವಾರ ಮನವಿ ಸಲ್ಲಿಸಲಾಯಿತು.

ಸಂಘದ ಜಿಲ್ಲಾಧ್ಯಕ್ಷ ಮಂಜುನಾಥ್ ಮಾತನಾಡಿ, ಜಿಲ್ಲಾ ಹಾಗೂ ತಾಲ್ಲೂಕು ಪಂಚಾಯಿತಿ ಮೂಲಕ ವಿವಿಧ ಸ್ಥಳಗಳಲ್ಲಿ ಕಳೆದ ಹಲವಾರು ವರ್ಷಗಳಿಂದ ಕರ್ತವ್ಯ ನಿರ್ವಹಿಸುತ್ತಿದ್ದೇವೆ. ಯೋಜನೆ ಸಮರ್ಪಕ ಅನುಷ್ಠಾನದಲ್ಲಿ ಹೊರ ಸಂಪನ್ಮೂಲ ನೌಕರರ ಪಾತ್ರ ಅಧಿಕವಾಗಿದೆ. ರಾಜ್ಯಾದ್ಯಂತ 3,632 ನೌಕರರು ನರೇಗಾ ಯೋಜನೆಯಡಿ ಕಾರ್ಯನಿರ್ವಹಿಸುತ್ತಿದ್ದಾರೆಂದರು.

ಕಳೆದ 6 ತಿಂಗಳಿಂದ ವೇತನ ಪಾವತಿಯಾಗದೆ ಸಮಸ್ಯೆಯಾಗಿದೆ. ನೌಕರರು ಆರ್ಥಿಕ ಸಂಕಷ್ಟಕ್ಕೆ ಸಿಲುಕುವಂತಾಗಿದೆ. ಸಂಬಳವಿಲ್ಲದೆ ಕುಟುಂಬ ನಿರ್ವಹಣೆ, ದಿನಸಿ ಸಾಮಾಗ್ರಿ ಖರೀದಿ, ಮಕ್ಕಳ ಶಾಲಾ ವೆಚ್ಚ, ಸಾಲ ಮರುಪಾವತಿ ಮಾಡಲಾಗದೆ ಸಂಕಷ್ಟ ಎದುರಿಸುವಂತಾಗಿದೆ ಎಂದರು.

ಸರ್ಕಾರ ಸಮಸ್ಯೆಯನ್ನು ಗಂಭೀರವಾಗಿ ಪರಿಗಣಿಸಿ ಆದಷ್ಟು ಬೇಗ ವೇತನ ಪಾವತಿಸಬೇಕು ಎಂದು ಮನವಿ ಮಾಡಿದರು.

ಸಂಘದ ಯೋಗೀಶ್, ಯಶವಂತ್, ಸುನೀಲ್, ವಿರೂಪಾಕ್ಷ, ಭುವನೇಶ್, ವಸಂತ್, ಕುಮಾರಸ್ವಾಮಿ, ಮಧು, ಮಾನಸ, ವಸಂತಕುಮಾರಿ ಇತರರಿದ್ದರು.

# ಬಿಜಿಎಸ್ ಮಠದಲ್ಲಿ ಗುರು ಪೂರ್ಣಿಮೆ ಇಂದು

ಹಾಸನ: ಆದಿಚುಂಚನಗಿರಿ ಮಹಾಸಂಸ್ಥಾನ ಹಾಸನ ಶಾಖಾ ಮಠದ ವತಿಯಿಂದ ಜು. 11ರ ಶುಕ್ರವಾರ ಸಂಜೆ 5.30ಕ್ಕೆ ನಗರದ ಆದಿಚುಂಚನಗಿರಿ ಸಮುದಾಯ ಭವನದಲ್ಲಿ ಹುಗುರು ತೋರಿದ ದಾರಿ ತಿಂಗಳ ಮಾಮನ ತೇರುಟ 130ನೇ ಹುಣ್ಣಿಮೆ ಹಾಗು ಗುರು ಪೂರ್ಣಿಮೆ, ಗುರು ಸ್ಮರಣೆ ಕಾರ್ಯಕ್ರಮ ಜರುಗಲಿದೆ.

ಆದಿಚುಂಚನಗಿರಿ ಮಹಾಸಂಸ್ಥಾನದ ಮಠದ ಪೀಠಾಧ್ಯಕ್ಷ ಡಾ. ಶ್ರೀ ನಿರ್ಮಲಾನಂದನಾಥ ಸ್ವಾಮೀಜಿ ದಿವ್ಯ ಸಾನಿಧ್ಯ ವಹಿಸಲಿದ್ದಾರೆ. ಹಾಸನ ಮಠದ ಶ್ರೀ ಶಂಭುನಾಥ ಸ್ವಾಮೀಜಿ, ವಿವಿಧ ಶಾಖಾ ಮಠಗಳ ಮಠಾಧೀಶರು ಭಾಗವಹಿಸಲಿದ್ದಾರೆ.

# ವೈಜ್ಞಾನಿಕ ತ್ಯಾಜ್ಯ ವಿಲೇವಾರಿಗೆ ಗ್ರಾ.ಪಂ. ಕ್ರಮ

## ನಿತ್ಯ 3 ಟನ್ ಘನತ್ಯಾಜ್ಯ ಸಂಗ್ರಹ : ಸಾರ್ವಜನಿಕರ ಆರೋಗ್ಯ, ಸ್ವಚ್ಛತೆಗೆ ಆದ್ಯತೆ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಚನ್ನರಾಯಪಟ್ಟಣ: ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಘನ ತ್ಯಾಜ್ಯವನ್ನು ತಾಲ್ಲೂಕಿನ ನಲ್ಲೂರು ಸಮೀಪದ ಘನತ್ಯಾಜ್ಯ ಸಂಸ್ಕರಣಾ ಘಟಕಕ್ಕೆ ಸ್ಥಳಾಂತರಿಸಲಾಗುತ್ತಿದೆ ಎಂದು ಗ್ರಾಮ ಪಂಚಾಯಿತಿ ಅಧ್ಯಕ್ಷ ಅಫ್ತಾಬ್ ಪಾಷಾ ಹೇಳಿದರು.

ತಾಲ್ಲೂಕಿನ ಶ್ರವಣಬೆಳಗೊಳದಲ್ಲಿ ಗುರುವಾರ ಘನತ್ಯಾಜ್ಯ ವಿಲೇವಾರಿಗೆ ಚಾಲನೆ ನೀಡಿ ಮಾತನಾಡಿ, ಶ್ರವಣಬೆಳಗೊಳವು ವಿಶ್ವವಿಖ್ಯಾತ ಧಾರ್ಮಿಕ ಹಾಗು ಪ್ರವಾಸಿ ತಾಣವಾಗಿದೆ. ನಿತ್ಯ ಸಾವಿರಾರು ಯಾತ್ರಾರ್ಥಿಗಳು, ಪ್ರವಾಸಿಗಳು ಆಗಮಿಸುತ್ತಾರೆ. ಅಲ್ಲದೆ ಗ್ರಾಮ ಪಂಚಾಯಿತಿ 10 ಸಾವಿರ ಜನಸಂಖ್ಯೆ ಹೊಂದಿದೆ. 3 ಟನ್ ಕಸ ನಿತ್ಯ ಸಂಗ್ರಹವಾಗುತ್ತಿದೆ. ಈ ಸ್ಥಳವನ್ನು ಸ್ವಚ್ಛವಾಗಿರಿಸಿ, ಆರೋಗ್ಯಯುತವಾಗಿಸುವುದು ನಮ್ಮೆಲ್ಲರ ಕರ್ತವ್ಯ. ಪ್ರತಿಯೊಬ್ಬರೂ ಗ್ರಾಮ ಪಂಚಾಯಿತಿಯೊಂದಿಗೆ ಸಹಕಾರ ನೀಡಬೇಕೆಂದು ಮನವಿ ಮಾಡಿದರು.



2018ರ ಮಹಾಮಸ್ತಕಾಭಿಷೇಕ ಮಹೋತ್ಸವ ಸಂದರ್ಭದಲ್ಲಿ ಹೋಬಳಿಯ ಕೋರೆನಹಳ್ಳಿ ಗ್ರಾಮದ ಸರ್ವೆ ನಂ. 37ರಲ್ಲಿ 5 ಎಕರೆ ಸರ್ಕಾರಿ ಜಾಗವನ್ನು ತ್ಯಾಜ್ಯ ಸಂಸ್ಕರಣ ಘಟಕ ನಿರ್ಮಾಣಕ್ಕೆ ಮಂಜೂರು ಮಾಡಲಾಗಿದೆ. ಆದರೆ ಆ ಜಾಗ ಎತ್ತರದ ಗುಡ್ಡ ಪ್ರದೇಶವಾಗಿರುವುದರಿಂದ ಕಸ ವಿಲೇವಾರಿ ಮಾಡಲು ಸಾಧ್ಯವಾಗದೆ ಸಮಸ್ಯೆಯಾಗಿದೆ. ಸಮಸ್ಯೆಯನ್ನು ಗಂಭೀರವಾಗಿ ಪರಿಗಣಿಸಿದ ಶಾಸಕ ಸಿ.ಎನ್. ಬಾಲಕೃಷ್ಣ ಅವರು ಚನ್ನರಾಯಪಟ್ಟಣ ಪುರಸಭೆ ಅಧಿಕಾರಿಗಳೊಂದಿಗೆ ಮಾತನಾಡಿ ನಲ್ಲೂರು ಸಂಸ್ಕರಣಾ ಘಟಕಕ್ಕೆ ತ್ಯಾಜ್ಯ ವಿಲೇವಾರಿ ಮಾಡಲು ಅವಕಾಶ ಕಲ್ಪಿಸಿದ್ದಾರೆಂದರು.

ಶ್ರವಣಬೆಳಗೊಳ ಪಟ್ಟಣ ಬೆಳೆದಂತೆ ಘನತ್ಯಾಜ್ಯ ಸಂಗ್ರಹವೂ ಹೆಚ್ಚಾಗಿದೆ. ಕಸ ವಿಲೇವಾರಿಗೆ ಸೂಕ್ತ ಸ್ಥಳವಿಲ್ಲದೆ ಪಟ್ಟಣದ ಸಂತೆ ಮೈದಾನದ ಸಮೀಪ ಶೇಖರಣೆ ಮಾಡಲಾಗುತ್ತಿತ್ತು. ಈ ಸ್ಥಳವು ಪ್ರತಿ ಮಂಗಳವಾರ ನಡೆಯುವ ಸಂತೆಗೆ ಹೊಂದಿಕೊಂಡಿದ್ದು, ಜನರ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುತ್ತಿದೆ ಎಂದು ಸಾರ್ವಜನಿಕರಿಂದ ದೂರುಗಳು ಕೇಳಿಬರುತ್ತಿವೆ. ಅಲ್ಲದೆ ಮೈಸೂರು ಹಾಗೂ ಮಂಡ್ಯ ಭಾಗದಿಂದ ಕ್ಷೇತ್ರಕ್ಕೆ ಸಂಪರ್ಕಿಸುವ ರಸ್ತೆಗೆ ಹೊಂದಿಕೊಂಡಿರುವುದರಿಂದ ಕಸ ವಿಲೇವಾರಿ ಮಾಡಲಾಗುತ್ತಿದೆ. ನಂತರ ಈ ಜಾಗವನ್ನು ಸಮತಟ್ಟುಗೊಳಿಸಿ ಕ್ಷೇತ್ರಕ್ಕೆ ಆಗಮಿಸುವ ವಾಹನಗಳ ಪಾರ್ಕಿಂಗ್ ಸ್ಥಳವನ್ನಾಗಿ ಮಾಡಲು ಯೋಜನೆ ರೂಪಿಸಲಾಗಿದೆ. ಕೋಳಿ ಮತ್ತು ಮಾಂಸದ ಅಂಗಡಿಗಳನ್ನು ಸ್ಥಳಾಂತರ ಮಾಡಲು ಪಟ್ಟಣ ಹೊರವಲಯದ ಸರ್ವೆ ನಂ. 331ರ 1 ಎಕರೆ 5 ಗುಂಟೆ ಸರ್ಕಾರಿ ಜಾಗವನ್ನು ಗುರುತಿಸಿದೆ. ಕಂದಾಯ ಇಲಾಖೆ ಮುಖಾಂತರ ಜಿಲ್ಲಾಧಿಕಾರಿಗೆ ಪ್ರಸ್ತಾವನೆ ಸಲ್ಲಿಸಲಾಗಿದೆ. ಚಿಕ್ಕದೇವರಾಜ ಒಡೆಯರ್ ಕಲ್ಯಾಣಿ ಪಕ್ಕದ ತರಕಾರಿ ಅಂಗಡಿಗಳನ್ನು ಪೊಲೀಸ್ ಠಾಣೆ ಪಕ್ಕದ ಮುಜಾಫರ್ ಖಾನ್ ಜಾಗದಲ್ಲಿ ಸೂಕ್ತ ವ್ಯವಸ್ಥೆ ಕಲ್ಪಿಸಿ ಸ್ಥಳಾಂತರಿಸಲು ಕ್ರಮ ವಹಿಸಲಾಗಿದೆ ಎಂದು ತಿಳಿಸಿದರು.

ಎಲ್ಲಾ ಸರ್ಕಾರಿ ಕಚೇರಿಗಳು ಒಂದೇ ಕಡೆ ಇದ್ದರೆ ಸಾರ್ವಜನಿಕರ ಕೆಲಸ ಕಾರ್ಯಗಳಿಗೆ ಅನುಕೂಲವಾಗಲಿದೆ ಎಂಬ ಉದ್ದೇಶದಿಂದ ಗ್ರಾಮ ಪಂಚಾಯಿತಿ ನೂತನ ಕಟ್ಟಡ ನಿರ್ಮಾಣ ಮಾಡಲು ಉದ್ದೇಶಿಸಲಾಗಿದ್ದು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಿಂದ ಮುಂಗಡ ಕಂತು 8 ಲಕ್ಷ ರೂ. ಮಂಜೂರಾಗಿದೆ ಎಂದು ಹೇಳಿದರು.

1 ವರ್ಷದ ಅವಧಿಯಲ್ಲಿ ನರೇಗಾ ಯೋಜನೆಯಡಿ ಅಂದಾಜು 90 ಲಕ್ಷ ರೂ. ಅಭಿವೃದ್ಧಿ ಕಾಮಗಾರಿ ಮಾಡಲಾಗಿದ್ದು, ಗ್ರಾಮ ಪಂಚಾಯಿತಿಯ 58 ಮಳಿಗೆಗಳ ಹರಾಜು ಪ್ರಕ್ರಿಯೆಯನ್ನು ಶೀಘ್ರ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಬಸವರಾಜ್ ಇದ್ದರು.

# ಹಣದಾಸೆಗೆ ತಂದೆ-ಅಣ್ಣನ ಬರ್ಬರ ಹತ್ಯೆ

## ಕೃತ್ಯವನ್ನು ತಾನೇ ಕರೆ ಮಾಡಿ ಹೇಳಿದ ಪಾಪಿ | ಬೆಚ್ಚಿಬಿದ್ದ ಗಂಗೂರು ಗ್ರಾಮ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹೊಳೆನರಸೀಪುರ: ಜಮೀನು ಮಾರಾಟ ಮಾಡಿ ಬಂದ ಹಣವನ್ನು ಹಂಚಿಕೆ ಮಾಡಲಿಲ್ಲವೆಂಬ ಸಿಟ್ಟಿನಿಂದ ಜಗಳ ತೆಗೆದ ಮಗ, ತಂದೆ ಹಾಗೂ ಅಣ್ಣನನ್ನು ಮಚ್ಚು, ಕೊಡಲಿಯಿಂದ ಬರ್ಬರವಾಗಿ ಹತ್ಯೆ ಮಾಡಿರುವ ಘಟನೆ ತಾಲೂಕಿನ ಗಂಗೂರು ಗ್ರಾಮದಲ್ಲಿ ನಡೆದಿದೆ.

ದೇವೇಗೌಡ (70), ಮಂಜುನಾಥ್ (50) ಕೊಲೆಯಾದವರು. ಮೋಹನ್ ಅಲಿಯಾಸ್ ನಾಗರಾಜ (41) ಎಂಬ ದುರುಳನೇ ಜೋಡಿ ಕೊಲೆ ಮಾಡಿದ ಆರೋಪಿ. ಈ ಘಟನೆ ಗ್ರಾಮವನ್ನೇ ಬೆಚ್ಚಿ ಬೀಳಿಸಿದೆ.

ಗ್ರಾಮದ ದೇವೇಗೌಡ-ಜಯಮ್ಮ ದಂಪತಿಗೆ ಮೂವರು ಹೆಣ್ಣು ಮಕ್ಕಳು, ಇಬ್ಬರು ಗಂಡು ಸೇರಿ 5 ಜನ ಮಕ್ಕಳಿದ್ದರು. ಹೆಣ್ಣು ಮಕ್ಕಳಿಗೆ ಮದುವೆ ಆಗಿದ್ದು, ಪುತ್ರರಿಗೆ ಮದುವೆ ಆಗಿರಲಿಲ್ಲ. ಆದರೆ ಬೇರೆ ಬೇರೆ ವಾಸವಾಗಿದ್ದರು. ಮಂಜುನಾಥ ಹೆತ್ತವರ ಜೊತೆ ಇದ್ದರೆ, ಮೋಹನ್



ಒಬ್ಬನೇ ಬೇರೆ ಇದ್ದ. ದೇವೇಗೌಡ ಇಬ್ಬರು ಮಕ್ಕಳಿಗೂ ಮನೆಯನ್ನೂ ವಿಭಾಗ ಮಾಡಿಕೊಟ್ಟಿದ್ದರು.

ದೇವೇಗೌಡರಿಗೆ ಪಿತ್ರಾರ್ಜಿತವಾಗಿ ಮೂರೂವರೆ ಎಕರೆ ಜಮೀನಿದ್ದು, ದೇವೇಗೌಡ, ತಮ್ಮ ಸಹೋದರ ನಂಜೇಗೌಡ ಸೇರಿ ಒಂದೂವರೆ ಎಕರೆ ಜಮೀನು ಖರೀದಿ ಮಾಡಿದ್ದರು.

ಆ ಪೈಕಿ 36 ಗುಂಟೆ ಜಮೀನು ಜಯಮ್ಮ ಅವರ ಸ್ವಾಧೀನದಲ್ಲಿತ್ತು. ಹೆಣ್ಣು ಮಕ್ಕಳ ಮದುವೆ ಸಮಯದಲ್ಲಿ 7 ಲಕ್ಷ ರೂ. ಹಾಗೂ ಕೈ ಸಾಲವಾಗಿ 5 ಲಕ್ಷ ರೂ. ಮಾಡಿದ್ದು, ಸಾಲ ತೀರಿಸದ ಕಾರಣಕ್ಕೆ ಆಗಾಗ ಪಡುವಲಹಿಪ್ಪೆ ಕಾವೇರಿ ಗ್ರಾಮೀಣ ಬ್ಯಾಂಕ್‌ನಿಂದ ನೋಟಿಸ್ ಬರುತ್ತಿತ್ತು.

ಹೀಗಾಗಿ 36 ಗುಂಟೆ ಜಮೀನನ್ನು ಕೃಷ್ಣಾಪುರ ಗ್ರಾಮದ ರಂಗಸ್ವಾಮಿ ಎಂಬುವರಿಗೆ ಶುದ್ಧಕ್ರಯಕ್ಕೆ 20 ಲಕ್ಷಕ್ಕೆ ಇತ್ತೀಚೆಗೆ ಮಾರಾಟ ಮಾಡಿದ್ದರು.

ಈ ಹಣದಲ್ಲಿ ನನಗೂ ಪಾಲು ಕೊಡಿ ಎಂದು ನಾಗರಾಜ ಮನೆಯಲ್ಲಿ ಗಲಾಟೆ ಮಾಡಲು ಆರಂಭಿಸಿದ. ಜು.9 ಸಂಜೆ 4 ಗಂಟೆ ಸಮಯದಲ್ಲಿ ಜಗಳ ತೆಗೆದು ಹಣ ಕೊಡದಿದ್ದರೇ ನಿಮ್ಮನ್ನು ಕೊಲೆ ಮಾಡುವುದಾಗಿ ಬೆದರಿಕೆ ಹಾಕಿದ್ದ. ಅದಕ್ಕೆ ಸಾಲದ ಹಣ ತೀರಿಸಿ, ಉಳಿದ ಹಣವನ್ನು ಹಂಚಿಕೆ ಮಾಡುವುದಾಗಿ ಹೆತ್ತವರು ಹೇಳಿದ್ದರು. ರಾತ್ರಿ 9 ಗಂಟೆ ಸಮಯದಲ್ಲಿ ಜಯಮ್ಮ, ದೇವೇಗೌಡ ಹಾಗೂ ಮಂಜುನಾಥ ಒಟ್ಟಿಗೆ ಊಟ ಮಾಡಿದರು. ಮಂಜುನಾಥ ಮನೆಯಲ್ಲಿದ್ದ ತೆಂಗಿನ ಕಾಯಿ ಸುಲಿದು ಬೆಳಗ್ಗೆ ಮಾರಾಟ ಮಾಡಲು ಹೋಗುವುದಾಗಿ ಹೇಳಿದ. ಇದನ್ನು ಕೇಳಿಸಿಕೊಂಡ ಮೋಹನ, ಮತ್ತೆ ಕೂಗಾಡಲು ಆರಂಭಿಸಿದ. ಇವನದ್ದು ಇದೇ ಗೋಳು ಎಂದು ಮೂವರೂ ಮನೆಯ ಹಾಲ್‌ನಲ್ಲಿ ಮಲಗಿದ್ದರು.

ಗುರುವಾರ ಬೆಳಗಿನ ಜಾವ 1 ಗಂಟೆ ಸುಮಾರಿಗೆ ಮೋಹನ ಮನೆಯ ತುಂಡು ಗೋಡೆಯಿಂದ ಜಿಗಿದು ಮನೆಯ ಅಡುಗೆ ಕೋಣೆಯಿಂದ ಒಳ ಪ್ರವೇಶ ಮಾಡಿ, ಏಕಾಏಕಿ ಪಡಸಾಲೆಯಲ್ಲಿ ಮಲಗಿದ್ದ ಮಂಜುನಾಥನ ತಲೆ ಮತ್ತಿತರ ಭಾಗಕ್ಕೆ ಬಲವಾಗಿ ಹೊಡೆದ, ಮಂಜುನಾಥ್ ಕಿರುಚಾಡಲು ಆರಂಭಿಸಿದ ದನಿ ಕೇಳಿ ಎಚ್ಚೆತ್ತ ತಾಯಿ-ತಂದೆ ಲೈಟ್ ಹಾಕಿದಾಗ ನಾಗರಾಜು ಬಲ ಕೈಯ್ಯಲ್ಲಿ ಮಚ್ಚು, ಎಡಕೈಯಲ್ಲಿ ಕೊಡಲಿ ಇತ್ತು. ಮಂಜುನಾಥನ ತಲೆ ಭಾಗದಲ್ಲಿ ರಕ್ತ ಬರುತ್ತಿದ್ದು, ದೇವೇಗೌಡರು ನಾಗರಾಜನನ್ನು ತಡೆಯಲು ಹೋದಾಗ ಅವರ ಕುತ್ತಿಗೆಗೂ ನಾಗರಾಜ ಹೊಡೆದು ಹತ್ಯೆ ಮಾಡಿದ್ದಾನೆ. ಒಡ ಹುಟ್ಟಿದ ಅಣ್ಣ ಮಂಜುನಾಥ ಮತ್ತು ತಂದೆ ದೇವೇಗೌಡರ ಜೀವ ಹೋಗುವವರೆಗೂ ಪಾಪಿ ಮನಬಂದಂತೆ ಕೊಚ್ಚಿದ್ದಾನೆ. ಬೆಳಗ್ಗೆ ತಾಯಿ ಜಯಮ್ಮ ಗ್ರಾಮಾಂತರ ಪೊಲೀಸರಿಗೆ ದೂರು ನೀಡಿದ್ದಾರೆ. ಸುದ್ದಿ ತಿಳಿದು ಎಸ್ಪಿ ಮಹಮದ್ ಸುಜೀತಾ, ಎಫ್‌ಎಸ್‌ಎಲ್ ತಂಡ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿತು.

### ಪ್ರಾಣಾಪಾಯದಿಂದ ಪಾರಾದ ತಾಯಿ

ಭಯಾನಕ ದೃಶ್ಯ ಕಂಡ ತಾಯಿ ಮಗನ ಕೈ ಕಟ್ಟಲು ಪ್ರಯತ್ನ ಮಾಡಿದಾಗ ಅವರ ಮೇಲೂ ಹಲ್ಲೆಗೆ ಯತ್ನಿಸಿದ್ದಾನೆ. ತಕ್ಷಣವೇ ಅವರು ಮನೆಯಿಂದ ಹೊರ ಬಂದು ಸಂಬಂಧಿಕರ ಮನೆಯಲ್ಲಿ ಉಳಿದು ಪ್ರಾಣ ಉಳಿಸಿಕೊಂಡಿದ್ದಾರೆ.

### ಶವಗಳ ಪಕ್ಕದಲ್ಲೇ ಮಲಗಿದ್ದ

ಕೇವಲ ಹಣದ ಕಾರಣಕ್ಕೆ ಡಬಲ್ ಮರ್ಡರ್ ಮಾಡಿದ ನಂತರ ಆರೋಪಿ ಮೋಹನ, ಶವಗಳ ಪಕ್ಕದಲ್ಲೇ ಮಲಗಿ ವಿಕೃತಿ ಮೆರೆದಿದ್ದಾನೆ. ಕೊಲೆ ಗಡುಕ ಮೋಹನ್ ಸೈಕೋಪಾತ್ ಎನ್ನಲಾಗಿದ್ದು, ಬೆಳಗ್ಗೆ ಆರೋಪಿಯನ್ನು ವಶಕ್ಕೆ ಪಡೆದಿರುವ ಪೊಲೀಸರು ವಿಚಾರಣೆಗೆ ಒಳಪಡಿಸಿದ್ದಾರೆ. ಆಸ್ತಿ ಕಾರಣಕ್ಕೆ ಹಿಂದಿನಿಂದಲೂ ಕ್ಯಾತೆ ತೆಗೆಯುತ್ತಿದ್ದ ನಾಗರಾಜ್, ಅನೇಕ ಬಾರಿ ಹಲ್ಲೆ ಸಹ ಮಾಡಿದ್ದ. ಇದೀಗ ಇಬ್ಬರನ್ನು ಇಲ್ಲವಾಗಿಸಿದ್ದಾನೆ. ನಂತರ ತನ್ನ ಅಕ್ಕ ಸುನೀತಾಗೆ ಫೋನ್ ಮಾಡಿ ಅಪ್ಪ ಹಾಗೂ ಅಣ್ಣನನ್ನ ಕೊಲೆ ಮಾಡಿದ್ದೀನಿ ನನಗೂ ಏಟಾಗಿದೆ ಬಂದು ಆಸ್ಪತ್ರೆಗೆ ಸೇರಿಸು ಎಂದಿದ್ದಾನೆ. ಇದರಿಂದ ಭಯಗೊಂಡ ಸುನೀತಾ ಗ್ರಾಮಕ್ಕೆ ಬಂದು ಮನೆಯೊಳಗೆ ಹೋಗಿ ನೋಡಿದಾಗ ತಂದೆ,ಅಣ್ಣ ರಕ್ತದ ಮಡುವಿನಲ್ಲಿ ಹೆಣವಾಗಿ ಬಿದ್ದಿದ್ದರೆ ರಕ್ಕಸ ಮೋಹನ್ ಅಲ್ಲೇ ಮಲಗಿದ್ದ.

# ಹಾಸನ ವಿದ್ಯಾರ್ಥಿನಿಯರ ಅಮೋಘ ಸಾಧನೆ




ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ತುಮಕೂರು ಸಿದ್ದಾರ್ಥ ಮಾಧ್ಯಮ ಅಧ್ಯಯನ ಕೇಂದ್ರದಲ್ಲಿ ಅಧ್ಯಯನ ಮಾಡಿದ ಹಾಸನದ ನಾಲ್ವರು ವಿದ್ಯಾರ್ಥಿನಿಯರು ಟಾಪರ್ ಆಗುವ ಮೂಲಕ ಜಿಲ್ಲೆಯ ಕೀರ್ತಿ ಹೆಚ್ಚಿಸಿದ್ದಾರೆ.

ಪತ್ರಿಕೋದ್ಯಮ ಮತ್ತು ಎಲೆಕ್ಟ್ರಾನಿಕ್ ಮೀಡಿಯಾ ಪದವಿಯಲ್ಲಿ ಅಗ್ರ ಶ್ರೇಣಿಯ ಅಂಕ ಪಡೆದ ವಿದ್ಯಾರ್ಥಿನಿಯರಿಗೆ ತುಮಕೂರು ವಿಶ್ವವಿದ್ಯಾಲಯದಲ್ಲಿ ನಡೆದ 18ನೇ ಘಟಿಕೋತ್ಸವದಲ್ಲಿ ರಾಜ್ಯಪಾಲರು ಪ್ರಮಾಣ ಪತ್ರ ಪ್ರದಾನ ಮಾಡಿದರು.

ನಗರದ ಕೃಷ್ಣಾ ಹಾಗೂ ಪುಷ್ಪಲತಾ ದಂಪತಿಯ ಪುತ್ರಿ ಹೆಚ್.ಕೆ. ರಂಜಿತಾ (ಚಿನ್ನದ ಪದಕ) ಮೊದಲ ಸ್ಥಾನ, ಬೇಲೂರು ಪಟ್ಟಣದ ಉಮೇಶ್ ಹಾಗೂ ಶೋಭಾ ದಂಪತಿ ಪುತ್ರಿ ಸಿಂಧು ತೃತೀಯ ಸ್ಥಾನ, ಚನ್ನರಾಯಪಟ್ಟಣ ತಾಲ್ಲೂಕಿನ ಕಸರನಹಳ್ಳಿ ಗ್ರಾಮದ ಮಂಜುಳಾ ಅವರ ಪುತ್ರಿ ದೀಪಿಕಾ ನಾಲ್ಕನೇ ಸ್ಥಾನ ಪಡೆದರೆ ಪತ್ರಿಕೋದ್ಯಮ ಹಾಗೂ ಸಮೂಹ ಸಂವಹನ ಸ್ನಾತಕೋತ್ತರ ಪದವಿಯಲ್ಲಿ ಹಾಸನ ತಾಲ್ಲೂಕಿನ ಬಲ್ಲೇನಹಳ್ಳಿ ಗ್ರಾಮದ ತಿಮಯ್ಯ ಹಾಗೂ ಪುಟ್ಟಲಕ್ಷ್ಮಿ ದಂಪತಿ ಪುತ್ರಿ ಬಿ.ಟಿ. ಅಂಬಿಕಾ ತೃತೀಯ ಸ್ಥಾನ ಪಡೆದಿದ್ದಾರೆ.

# ಸಾಮಾಜಿಕ ಪಿಡುಗಿನ ವಿರುದ್ಧ ಹೋರಾಡಿದ ಹಡಪದ ಅಪ್ಪಣ್ಣ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್



ಹಾಸನ: ಸಮಾಜದಲ್ಲಿದ್ದ ಮೌಢ್ಯ, ಕಂದಾಚಾರ, ಜಾತಿ ಪದ್ಧತಿಯಂತಹ ಪಿಡುಗಿನ ವಿರುದ್ಧ 12ನೇ ಶತಮಾನದಲ್ಲಿ ಬಸವಣ್ಣ ಅವರ ಅನುಯಾಯಿಯಾಗಿ ಹೋರಾಟ ಮಾಡುವುದರ ಜೊತೆಗೆ ವಚನಗಳನ್ನು ರಚಿಸಿದ ಹಡಪದ ಅಪ್ಪಣ್ಣ ಅವರ ಹಾದಿಯಲ್ಲಿ ನಾವೆಲ್ಲರೂ ಸಾಗಬೇಕು ಎಂದು ಜಿಲ್ಲಾಧಿಕಾರಿ ಕಚೇರಿಯ ತಹಶೀಲ್ದಾರ್ ಎಲ್.ಎಸ್. ರಮೇಶ್ ತಿಳಿಸಿದರು.

ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಗುರುವಾರ ಹಾಸನಾಂಬ ಕಲಾಕ್ಷೇತ್ರದಲ್ಲಿ ಆಯೋಜಿಸಿದ್ದ ಶಿವಶರಣ ಶ್ರೀ ಹಡಪದ ಅಪ್ಪಣ್ಣ ಜಯಂತಿ ಉದ್ಘಾಟಿಸಿ ಮಾತನಾಡಿದ ಅವರು, ಸರ್ಕಾರ ಇಂತಹ ಸಮಾಜ ಸುಧಾರಕರ ಜಯಂತಿಗಳನ್ನು ಆಚರಣೆ ಮಾಡುವುದರ ಉದ್ದೇಶ ಸಮಾಜದ ಉದ್ಧಾರಕ್ಕಾಗಿ ಯಾರ್ಯಾರು ಶ್ರಮಿಸಿದ್ದಾರೋ ಅವರನ್ನು ಸ್ಮರಿಸಿ ಗೌರವಿಸಲು ಹಾಗೂ ಅವರು ಹಾಕಿಕೊಟ್ಟ ದಾರಿಯಲ್ಲಿ ಮುಂದುವರೆಯಲು ಎಂದರು.

ತಹಶೀಲ್ದಾರ್ ಹುಲಿವಾಲ ಮೋಹನ್‌ಕುಮಾರ್ ಮಾತನಾಡಿ, ಬಸವಣ್ಣ ಅವರನ್ನು ನೆನೆಸುವಾಗ ಹಡಪದ ಅಪ್ಪಣ್ಣ ಅವರನ್ನು ಸ್ಮರಿಸದೆ ಇರುವುದಕ್ಕೆ ಸಾಧ್ಯವಿಲ್ಲ. ಬಸವಣ್ಣನವರ ಬಳಿ ಪ್ರಧಾನ ಕಾರ್ಯದರ್ಶಿಯಾಗಿ ಕೆಲಸ ನಿರ್ವಹಿಸಿ ಜಾತಿಯತೆಯಂತಹ ಅನೇಕ ತೊಡರುಗಳನ್ನು ಸರಿಪಡಿಸಲು ಶ್ರಮಿಸಿದವರಲ್ಲಿ ಅಪ್ಪಣ್ಣ ಪ್ರಮುಖರಾಗಿದ್ದಾರೆ ಎಂದು ತಿಳಿಸಿದರು.

ಸಾಹಿತಿ ಪವನ್ ಕುಮಾರ್ ಮಾತನಾಡಿ, ವೈಚಾರಿಕ ಚಿಂತನೆ ಮೂಡಿಸಿದ ಮಹಾನ್ ವ್ಯಕ್ತಿ ಹಡಪದ ಅಪ್ಪಣ್ಣ. ಇವರ ಖ್ಯಾತಿಯನ್ನು ತಿಳಿದು ಬಸವಣ್ಣನವರೇ ಅನುಭವ ಮಂಟಪದ ಮುಖ್ಯ ಕಾರ್ಯದರ್ಶಿಯಾಗಿ ನೇಮಿಸಿದ್ದರು. ಇವರ ಬಲಗೈ ಬಂಟನಾಗಿದ್ದರು. ಯಾವ ವ್ಯಕ್ತಿಯೂ ಕೀಳಲ್ಲ ಯಾವ ವ್ಯಕ್ತಿಯು ಮೇಲಲ್ಲ ಎಂದು ತಿಳಿಸಿದ ಮಹಾನ್ ವ್ಯಕ್ತಿ. ಅಂದಿನ ಕಾಲದಲ್ಲಿಯೇಯುವ ಸಮಾಜದಧ್ವನಿಯಾಗಿದ್ದವರು. ಇವರು 250ಕ್ಕೂ ಹೆಚ್ಚು ವಚನಗಳನ್ನು ರಚಿಸಿದ್ದಾರೆ. ಜಾತಿಯತೆಅಜ್ಞಾನ ಮೂಢನಂಬಿಕೆಗಳನ್ನು ವಿರೋಧಿಸಿ ವೈಚಾರಿಕತೆಯ ಮೂಲಕ ಬೆಳಕು ಚೆಲ್ಲಿದಂತಹ ಮಹಾನ್ ವ್ಯಕ್ತಿ. ಇಂದಿಗೂ ಬನವಾಸಿಯ ಮಧುಕೇಶ್ವರದೇವಾಲಯದ ಶಿಯೋತ್ಸವ ಮಂಟಪದಗಗ್ಗರಿಕಲ್ಲಿನ ಮೇಲೆ ಅಪ್ಪಣ್ಣನವರ ಶಿಲ್ಪಗಳನ್ನು ಕಾಣಬಹುದುಎಂದರು.

ಹಡಪದ ಎಂದರೆ ಕ್ಷೌರಿಕ ವೃತ್ತಿ ಎಂದರ್ಥ. ಅಪ್ಪಣ್ಣನವರು ಕ್ಷೌರಿಕ ವೃತ್ತಿಯನ್ನು ಮಾಡುತ್ತಿದ್ದವರಾಗಿದ್ದಾರೆ. ಒಬ್ಬ ಕುರೂಪಿಯಾದ ವ್ಯಕ್ತಿಯನ್ನುಅಂದಚಂದವಾಗಿ ಮಾಡಿ ಸಮಾಜದ ಮುಖ್ಯ ವಾಹಿನಿಗೆ ತರುವವರು ನಮ್ಮ ಕ್ಷೌರಿಕ ಸಮಾಜದವರಾಗಿದ್ದಾರೆ. ಹಾಗಾಗಿ ಜಾತಿ ಧರ್ಮದಾಚೆ ಮನುಷ್ಯ ಧರ್ಮ ದೊಡ್ಡದು ಎಂದು ಇವರು ತೋರಿಸಿದ್ದಾರೆ ಎಂದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಡಾ. ಹೆಚ್.ಪಿ. ತಾರಾನಾಥ್, ಹಾಸನ ಜಿಲ್ಲಾ ನೌಕರರ ಸಂಘದ ಖಜಾಂಚಿ ಕೆ.ಆರ್. ಹೇಮಂತ್ ಇತರರಿದ್ದರು.

# ಬಡಾವಣೆ ಅಭಿವೃದ್ಧಿಗೆ ಕ್ರಮ: ಸಿಮೆಂಟ್ ಮಂಜು

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಸಕಲೇಶಪುರ: ಪಟ್ಟಣದ ಪುರಸಭಾ ವ್ಯಾಪ್ತಿಯ ಹಲವು ಬಡಾವಣೆಗಳಲ್ಲಿ ಪಾರ್ಕ್, ರಸ್ತೆ, ಚರಂಡಿ ನಿರ್ಮಾಣದ ಅಗತ್ಯವಿದ್ದು, ಹಂತ ಹಂತವಾಗಿ ಕಾಮಗಾರಿ ಕೈಗೆತ್ತಿಕೊಳ್ಳಲಾಗುವುದು ಎಂದು ಶಾಸಕ ಸಿಮೆಂಟ್ ಮಂಜು ಭರವಸೆ ನೀಡಿದರು.

ಪಟ್ಟಣದ ಹಲವಾರು ಬಡಾವಣೆಗಳಿಗೆ ಭೇಟಿ ನೀಡಿ ಮಾತನಾಡಿದ ಅವರು, ಪುರಸಭಾ ವ್ಯಾಪ್ತಿಯ ಅನೇಕ ಬಡಾವಣೆಗಳಲ್ಲಿ ಪಾರ್ಕ್‌ಗಾಗಿ ಮೀಸಲಿಟ್ಟ ಸ್ಥಳಗಳಲ್ಲಿ ಪಾರ್ಕ್ ನಿರ್ಮಾಣಗೊಂಡಿದ್ದರೂ ನಿರ್ವಹಣೆಯ ಕೊರತೆಯಿಂದ ಸಾರ್ವಜನಿಕರಿಗೆ ಬಳಕೆಯಾಗುತ್ತಿಲ್ಲ. ಇನ್ನೂ ಕೆಲವು ಬಡಾವಣೆಗಳಲ್ಲಿ ರಸ್ತೆ, ಚರಂಡಿ ಹಾಗೂ ಮೂಲಭೂತ ಸೌಕರ್ಯಗಳ ಕೊರತೆ ಕಾಣಿಸಿಕೊಂಡಿದೆ ಎಂದು ತಿಳಿಸಿದರು.



2002ರಲ್ಲಿ ಪುರಸಭೆಗೆ ಹಸ್ತಾಂತರಗೊಂಡ ಹೌಸಿಂಗ್ ಬೋರ್ಡ್ ಬಡಾವಣೆಯಲ್ಲಿ ಇದುವರೆಗೆ ಯಾವುದೇ ಅಭಿವೃದ್ಧಿ ಕಾರ್ಯ ನಡೆದಿಲ್ಲ. ಪಾರ್ಕ್, ತಡೆಗೋಡೆ, ಚರಂಡಿ, ಆಟದ ಮೈದಾನ ಹಾಗೂ ಕರ್ನಾಟಕ ಗೃಹ ಮಂಡಳಿ ನಿರ್ಮಿಸಿರುವ ನೀರಿನ ಟ್ಯಾಂಕ್ ಶಿಥಿಲಾವಸ್ಥೆಯಲ್ಲಿದ್ದು, ಓವರ್‌ಹೆಡ್ ಟ್ಯಾಂಕ್‌ನ ಅಗತ್ಯವಿದೆ. ಈ ಎಲ್ಲ ಸಮಸ್ಯೆಗಳಿಗೆ ಹೆಚ್ಚಿನ ಆದ್ಯತೆ ನೀಡಿ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗುವುದು ಎಂದು ಅವರು ತಿಳಿಸಿದರು.

ಕೆಲವು ಬಡಾವಣೆಗಳಲ್ಲಿ ಅಂಗನವಾಡಿ, ಶಾಲೆ, ಆಟದ ಮೈದಾನ, ಪಾರ್ಕ್ ಉದ್ದೇಶಕ್ಕಾಗಿ ಬಿಟ್ಟಿರುವ ಜಾಗಗಳು ಅನ್ಯರ ಹೆಸರಲ್ಲಿ ಖಾತೆ ಮಾಡಿರುವುದನ್ನು ಗಮನಿಸಿ, ಅವುಗಳ ಪರಿಶೀಲನೆ ನಡೆಸಲಾಗುವುದು ಎಂಬ ಭರವಸೆ ನೀಡಿದರು.

ಪುರಸಭೆ ಮುಖ್ಯಾಧಿಕಾರಿ ಮಹೇಶ್ವರಪ್ಪ, ಎಂಜಿನಿಯರ್ ಸುಜಾತಾ, ಬಿಜೆಪಿ ಮುಖಂಡರಾದ ಸುದೀಶ್, ಲೋಕೇಶ್ ಮತ್ತಿತರರು ಇದ್ದರು.

# ಶಶಿಧರ್‌ಗೆ ಆತ್ಮೀಯ ಬೀಳ್ಕೊಡುಗೆ



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಅರಸೀಕೆರೆ: ನಾವು ಕಲಿತ ವಿದ್ಯೆ, ಗಳಿಸಿದ ಸಂಪತ್ತು ಮತ್ತೊಬ್ಬರ ಬದುಕಿಗೆ ಬೆಳಕಾದರೆ ಅದಕ್ಕಿಂತ ದೊಡ್ಡ ಸಾರ್ಥಕತೆಯ ಜೀವನ ಮತ್ತೊಂದಿಲ್ಲ ಎಂದು ಪ್ರಾಂಶುಪಾಲ ಡಾ.ಬಸವರಾಜು ಹೇಳಿದರು.

ತಾಲೂಕಿನ ಹರಿಹರಪುರದ ಸರ್ಕಾರಿ ಕಿರಿಯ ಪ್ರಾಥಮಿಕ ಪಾಠ ಶಾಲೆಯ ಶಿಕ್ಷಕರಾಗಿ ಸುದೀರ್ಘ ಸೇವೆ ಸಲ್ಲಿಸಿ, ವಯೋ ನಿವೃತ್ತರಾದ ಶಿಕ್ಷಕ ಹೆಚ್.ಶಶಿಧರ್ ಅವರಿಗೆ ಶಾಲಾ ಆಡಳಿತ ಮಂಡಳಿ ಗ್ರಾಮಸ್ಥರು ಹಾಗೂ ಅವರ ಅಭಿಮಾನಿ ಬಳಗದ ವತಿಯಿಂದ ಆಯೋಜಿಸಿದ್ದ ಬೀಳ್ಕೊಡುಗೆ ಸಮಾರಂಭದಲ್ಲಿ ಪಾಲ್ಗೊಂಡು ಮಾತನಾಡಿದರು.

ಶಶಿಧರ್ ಮಾಸ್ತ್ರು ಶಿಕ್ಷಕರಾಗಿ ಪಠ್ಯಪುಸ್ತಕದ ಶಿಕ್ಷಣ ಜತೆಗೆ ವಿದ್ಯಾರ್ಥಿಗಳಲ್ಲಿ ಆಟೋಟ ಸೇರಿದಂತೆ ಸಾಮಾಜಿಕ ಕಳಕಳಿಯ ಚಿಂತನೆಯನ್ನು ಮಕ್ಕಳಲ್ಲಿ ಬಾಲ್ಯದಿಂದಲೇ ಬೆಳೆಸುವ ಸಾರ್ಥಕ

ಶಿಕ್ಷಣ ನೀಡುತ್ತಾ ಬಂದಿದ್ದರಿಂದ ಶಶಿಧರ್ ಮಾಸ್ಟರ್ ಅಂದರೆ ವಿದ್ಯಾರ್ಥಿಗಳಿಗೆ ಮಾತ್ರವಲ್ಲ ಗ್ರಾಮಸ್ಥರು ಹಾಗೂ ಅವರ ಅಭಿಮಾನಿಗಳಿಗೆಲ್ಲ ಮಾರ್ಗದರ್ಶಕರಾಗಿದ್ದರು ಅಂತ ಸಾರ್ಥಕ ಜೀವನ ಶಶಿಧರ್ ಅವರದ್ದಾಗಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಅಭಿನಂದನೆ ಸ್ವೀಕರಿಸಿ ಮಾತನಾಡಿದ ಶಶಿಧರ್, ಸಮಾಜದಲ್ಲಿ ಶಿಕ್ಷಕರ ಪಾತ್ರ ಅತ್ಯಂತ ಮಹತ್ವದ್ದಾಗಿದೆ. ಅಂತಹ ಜವಾಬ್ದಾರಿತ ಕ್ಷೇತ್ರದಲ್ಲಿ ನನ್ನದು ಅಳಿಲು ಸೇವೆಯಾಗಿದೆ.

ಆದರೂ ನನ್ನ ಈ ಸೇವೆ ಗುರುತಿಸಿ ನನ್ನ ಪ್ರೀತಿಯ ವಿದ್ಯಾರ್ಥಿಗಳು ಸಹ ಶಿಕ್ಷಕರು ಹಾಗೂ ನನ್ನ ಹಿತೈಷಿಗಳೆಲ್ಲ ಸೇರಿ ನನಗೆ ಬೀಳ್ಕೊಡುಗೆ ನೀಡುತ್ತಿರುವುದಕ್ಕೆ ಬೆಲೆ ಕಟ್ಟಲು ಸಾಧ್ಯವಿಲ್ಲ ಎಂದರು.

ಸಮಾರಂಭದಲ್ಲಿ ಶಶಿಧರ್ ದಂಪತಿಗಳನ್ನು ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಶಾಲೆಯ ಸಹ ಶಿಕ್ಷಕರು, ಗ್ರಾಮಸ್ಥರು ಹಾಗೂ ಹಿತೈಷಿಗಳು ಉಪಸ್ಥಿತರಿದ್ದರು.

# ಪ್ರಾಮಾಣಿಕ ಕೆಲಸದಿಂದ ಅಭಿವೃದ್ಧಿಗೆ ಸಹಕರಿಸಿ

## ತಾಪಂ ಕೆಡಿಪಿ ಸಭೆಯಲ್ಲಿ ಶಾಸಕ ಸ್ವರೂಪ್ ಸೂಚನೆ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಇಲಾಖೆ ಅಧಿಕಾರಿಗಳು ತಮಗೆ ವಹಿಸಿದ ಜವಾಬ್ದಾರಿಯನ್ನು ಪ್ರಾಮಾಣಿಕವಾಗಿ ನಿಭಾಯಿಸುವ ಮೂಲಕ ಅಭಿವೃದ್ಧಿಗೆ ಸಹಕರಿಸಬೇಕು ಎಂದು ಶಾಸಕ ಹೆಚ್.ಪಿ. ಸ್ವರೂಪ್ ಹೇಳಿದರು.

ನಗರದ ತಾಲ್ಲೂಕು ಪಂಚಾಯಿತಿ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ತ್ರೈಮಾಸಿಕ ಕೆಡಿಪಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿ, ಕೆಲವು ಇಲಾಖೆಗಳಲ್ಲಿ ನಿರೀಕ್ಷಿತ ಪ್ರಮಾಣದಲ್ಲಿ ಪ್ರಗತಿ ಸಾಧಿಸದೆ ಇರುವುದಕ್ಕೆ ಅಸಮಾಧಾನ ವ್ಯಕ್ತಪಡಿಸಿದ ಶಾಸಕರು, ನಿಗದಿತ ಕಾಲಮಿತಿಯೊಳಗೆ ಗುರಿ ಸಾಧಿಸಬೇಕು ಎಂದು ಸೂಚಿಸಿದರು.

ಆಯಾ ಇಲಾಖೆಗಳ ವ್ಯಾಪ್ತಿಯ




ಯೋಜನೆಗಳು ಬಗ್ಗೆ ರೈತರು, ಜನರಿಗೆ ಮನವರಿಕೆ ಮಾಡಬೇಕು. ಈ ಸಂಬಂಧ ಹೆಚ್ಚು ಹೆಚ್ಚು ಪ್ರಚಾರ ಮಾಡಬೇಕು ಎಂದು ಸಲಹೆ ನೀಡಿದರು.

ಇದೇ ವೇಳೆ ತಾಲೂಕು ಅರಣ್ಯ ಇಲಾಖೆಯಿಂದ ಈ ಬಾರಿ ಪರಿಸರ ದಿನಾಚರಣೆ ಆಚರಣೆ ಮಾಡದೇ ಇರುವುದಕ್ಕೆ ಶಾಸಕರು ಗರಂ ಆದರು. ಜೂ.4 ರಂದು ಬೆಂಗಳೂರಿನಲ್ಲಿ ಕಾಲ್ತುಳಿತ ದುರಂತ ಸಂಭವಿಸಿದ್ದರಿಂದ ಜೂ.5 ಕಾರ್ಯಕ್ರಮವನ್ನು ಸರ್ಕಾರ ರದ್ದು ಮಾಡಿತ್ತು. ಆದರೆ ನಾವು ಸ್ಕೌಟ್ಸ್ ಅಂಡ್ ಗೈಡ್ಸ್ ಸಹಕಾರದೊಂದಿಗೆ ಸರ್ಕಾರಿ ಮಹಿಳಾ ಪದವಿ ಕಾಲೇಜಿನಲ್ಲಿ ಕಾರ್ಯಕ್ರಮ ಮಾಡಿದೆವು ಎಂದು ಅಧಿಕಾರಿ ಹೇಳಿದರು.

ಅದಕ್ಕೆ ಸಿಟ್ಟಾದ ಶಾಸಕರು, ಅಂದಿನ ಕಾರ್ಯಕ್ರಮಕ್ಕೆ ತಮ್ಮನ್ನೇಕೆ ಆಹ್ವಾನಿಸಲಿಲ್ಲ ಎಂದು ಕೇಳಿದರು. ಇದೇ ವೇಳೆ ಇಲಾಖೆ ವ್ಯಾಪ್ತಿಯಲ್ಲಿ ಕಳೆದ ಎರಡು ವರ್ಷಗಳಿಂದ ಏನೆಲ್ಲಾ ಕೆಲಸ ಮಾಡಿದ್ದೀರಿ, ಎಷ್ಟು ಸಸಿ ನೆಟ್ಟಿದ್ದೀರಿ ಎಂಬ ಬಗ್ಗೆ ಮಾಹಿತಿ ಕೊಡಿ ಎಂದು ತಾಕೀತು ಮಾಡಿದರು.

ಇಲಾಖೆಯಲ್ಲಿ ಲೋಪ ನಡೆದಿರುವ ಶಂಕೆ ಇದೆ. ಕೆಐಎಡಿಬಿ ವ್ಯಾಪ್ತಿಯ 3 ಎಕರೆಯಲ್ಲಿ ಬಫರ್ ಝೋನ್, ಯರೇಹಳ್ಳಿ-ಮಣಚನಹಳ್ಳಿ ಭಾಗದಲ್ಲಿ ಸಸಿ ನೆಡಲಾಗಿದೆ. 18 ಕಿಮೀ ಸಸಿ ನೆಡಲಾಗಿದೆ ಎಂದು ಅಧಿಕಾರಿ ಮಾಹಿತಿ ನೀಡಿದರು. ಆದರೆ ಚಿಕ್ಕಕಡಲೂರು-ದುದ್ದ ನಡುವೆ ನೆಟ್ಟಿರುವ ಸಸಿ ನಿರ್ವಹಣೆ ಮಾಡಲು ಲಕ್ಷಾಂತರ ರೂ. ಖರ್ಚು ಮಾಡಿರುವುದನ್ನು ಅಸಮಾಧಾನ ಹೊರ ಹಾಕಿದ ಶಾಸಕರು, ಈ ಬಗ್ಗೆ ಪರಿಶೀಲಿಸಿ ವರದಿ ಕೊಡಿ ಎಂದು ತಾಪಂ ಇಒ ಅವರಿಗೆ ಸೂಚನೆ ನೀಡಿದರು.

ಅಲ್ಲದೆ ಅರಸೀಕೆರೆ ರಸ್ತೆ, ಕೈಗಾರಿಕಾ ಪ್ರದೇಶ, ವಿಶ್ವವಿದ್ಯಾನಿಲಯ ಮೊದಲಾದ ಕಡೆ ಹಿಂದೆ ಆಗಿರುವ ಪ್ರಗತಿಯನ್ನು ಈಗಿನದು ಎಂದು ತೋರಿಸಲಾಗುತ್ತಿದೆ.

ಈ ಬಗ್ಗೆಯೂ ಕೂಲಂಕುಶ ಪರಿಶೀಲನೆ ನಡೆಸಿ. ಹಾಗೆಯೇ ನರೇಗಾ ಯೋಜನೆಯಡಿ ಪರಿಸರ ಬಲವರ್ಧನೆ ಸಂಬಂಧ ಏನೆಲ್ಲಾ ಪ್ರಗತಿ ಸಾಧಿಸಿದ್ದೀರಿ ಎಂಬುದರ ಬಗ್ಗೆ ನನಗೆ ಖುದ್ದು ಮಾಹಿತಿ ಕೊಡಿ ಎಂದು ಕಟ್ಟಪ್ಪಣೆ ಮಾಡಿದರು.

# ಶುಲ್ಕ ಹೆಚ್ಚಳಕ್ಕೆ ಎಐಡಿಎಸ್‌ಓ ಖಂಡನೆ



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಎಂಜಿನಿಯರಿಂಗ್ ಮತ್ತು ಆರ್ಕಿಟೆಕ್ಚರ್ ಕೋರ್ಸ್‌ಗಳಿಗೆ ಶುಲ್ಕ ಹೆಚ್ಚಳ ಮಾಡಿರುವ ರಾಜ್ಯ ಸರ್ಕಾರದ ನಡೆಯನ್ನು ಎಐಡಿಎಸ್‌ಓ ವಿದ್ಯಾರ್ಥಿ ಸಂಘಟನೆ ಖಂಡಿಸಿದೆ.

ಖಾಸಗಿ ಅನುದಾನ ರಹಿತ ಕಾಲೇಜುಗಳ ಸರ್ಕಾರಿ ಸೀಟುಗಳ ಶುಲ್ಕವನ್ನು ಶೇ. 7.5 ರಷ್ಟು ಹೆಚ್ಚಿಸಲಾಗಿದೆ. ಸರ್ಕಾರಿ ಕಾಲೇಜುಗಳ ಶುಲ್ಕವನ್ನು ಶೇ. 5 ರಷ್ಟು ಏರಿಕೆ ಮಾಡಲಾಗಿದೆ. ಶುಲ್ಕ ಹೆಚ್ಚಿಸುವುದೇ ರಾಜ್ಯ ಸರ್ಕಾರದ ಕಾರ್ಯವೈಖರಿ ಎಂದು ಎಐಡಿಎಸ್‌ಓ ಜಿಲ್ಲಾ ಸಂಚಾಲಕಿ ಚೈತ್ರ ಟೀಕಿಸಿದ್ದಾರೆ.

ರೈತ, ಕಾರ್ಮಿಕರು ಆರ್ಥಿಕ ಸಂಕಷ್ಟ ಎದುರಿಸುತ್ತಿರುವ ಸಂದರ್ಭದಲ್ಲಿ ಶುಲ್ಕ ಹೆಚ್ಚಿಸಿದೆ. ಸರ್ಕಾರ ಕೂಡಲೇ ತನ್ನ ವಿದ್ಯಾರ್ಥಿ ವಿರೋಧಿ ಹಾಗು ಜನ ವಿರೋಧಿ ನಿಲುವನ್ನು ಕೈಬಿಟ್ಟು ಶುಲ್ಕ ಕಡಿತಗೊಳಿಸಬೇಕೆಂದು ಅವರು ಒತ್ತಾಯಿಸಿದ್ದಾರೆ.

# ಆಟೋ ಪಲ್ಟಿಯಾಗಿ ಚಾಲಕ ಸಾವು

ಹಾಸನ: ಪ್ಯಾಸೆಂಜರ್ ಆಟೋ ಪಲ್ಟಿಯಾಗಿ ಚಾಲಕ ಮೃತಪಟ್ಟಿರುವ ಘಟನೆ ಬಿಎಂ ರಸ್ತೆಯ ರಾಜಘಟ್ಟ ವೃತ್ತದಲ್ಲಿ ನಡೆದಿದೆ. ಶಾಂತಿನಗರದ ಪುನೀತ್ (36) ಮೃತರು. ಮಂಗಳವಾರ ರಾತ್ರಿ 10 ಗಂಟೆ ಸಮಯದಲ್ಲಿ ಡೈರಿ ವೃತ್ತದಿಂದ ಎನ್‌ಆರ್ ವೃತ್ತದ ಕಡೆಗೆ ಹೋಗುತ್ತಿದ್ದಾಗ ಪೃಥ್ವಿ ಚಿತ್ರಮಂದಿರ ಎದುರಿನ ಹಂಪ್‌ಗೆ ಆಟೋ ಜೋರಾಗಿ ಡಿಕ್ಕಿಯಾದ ಪರಿಣಾಮ ಪಲ್ಟಿಯಾಗಿದೆ. ಗಂಭೀರ ಗಾಯಗೊಂಡಿದ್ದ ಅವರನ್ನು ಸ್ಥಳೀಯರು ಹಿಮ್ಸ್‌ಗೆ ದಾಖಲಿಸಿದ್ದರು. ಹೆಚ್ಚಿನ ಚಿಕಿತ್ಸೆಗಾಗಿ ಬೆಂಗಳೂರಿನ ವಿಕ್ಟೋರಿಯಾ ಆಸ್ಪತ್ರೆಗೆ ಕರೆದೊಯ್ಯುತ್ತಿದ್ದಾಗ ಮಾರ್ಗಮಧ್ಯೆ ಮೃತಪಟ್ಟಿದ್ದಾರೆ. ಸಂಚಾರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಯುವಕರು ಉದ್ಯಮ ಸ್ಥಾಪಿಸಿ ಉದ್ಯೋಗದಾತರಾಗಿ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಯುವ ಸಮುದಾಯವು ಕೇವಲ ಉದ್ಯೋಗ ಪಡೆಯುವ ಕನಸು ಕಾಣದೆ ಸಣ್ಣ ಕೈಗಾರಿಕೆಗಳ ಸ್ಥಾಪನೆ ಮಾಡಿ ನಿರುದ್ಯೋಗಿಗಳಿಗೆ ಉದ್ಯೋಗ ನೀಡುವ ಕನಸು ಕಾಣಬೇಕು ಎಂದು ಪುಷ್ಕರಣಿ ಐಟಿಐ ಪ್ರಾಂಶುಪಾಲ ಎನ್. ವಿಶ್ವನಾಥ್ ಹೇಳಿದರು.

ನಗರದ ಪುಷ್ಕರಣಿ ತರಬೇತಿ ಸಂಸ್ಥೆ ಆವರಣದಲ್ಲಿ ಲಘು ಉದ್ಯೋಗ ಭಾರತಿ ಹಾಸನ ಘಟಕ ಹಾಗೂ ರೋಟರಿ ಮಿಡ್‌ಟೌನ್ ವತಿಯಿಂದ ನಡೆದ ವಿಕ್ಷಿತ್ ಭಾರತ್ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಸಣ್ಣ, ಅತಿ ಸಣ್ಣ ಕೈಗಾರಿಕೆಗಳ ಸ್ಥಾಪನೆಯಿಂದ ದುಡಿಯುವ ಕೈಗಳಿಗೆ ಕೆಲಸ ದೊರಕುವ ಜೊತೆಗೆ ದೇಶದ ಆರ್ಥಿಕ ಪ್ರಗತಿಗೂ ವೇಗ ಸಿಗಲು ಸಾಧ್ಯ. ಇಂದು ಎಲ್ಲ ಕಡೆ ಸಾಕಷ್ಟು ಮೂಲಸೌಕರ್ಯ ಅಭಿವೃದ್ಧಿಯಾಗಿದೆ. ಅದರ ಸದ್ಬಳಕೆ ಮಾಡಿಕೊಂಡು ಸಣ್ಣ ಉದ್ಯೋಗಗಳ ಸ್ಥಾಪನೆಗೆ ಪ್ರಯತ್ನ ನಡೆದಿವೆ. ಅದಕ್ಕಾಗಿ ಸರ್ಕಾರ ಸಹ ಅನೇಕ ಯೋಜನೆಗಳನ್ನು ಜಾರಿಗೊಳಿಸಿದೆ. ನಿಯಮಗಳ ಸರಳೀಕರಣಗೊಳಿಸಿದೆ.




ಯುವ ಪೀಳಿಗೆ ಈ ರೀತಿಯಾಗಿ ಸಣ್ಣ ಉದ್ಯಮ ಮಾಡುವ ಕನಸು ಕಂಡು ಆರ್ಥಿಕವಾಗಿ ಸಬಲರಾಗಿ, ಇನ್ನೊಬ್ಬರಿಗೆ ಉದ್ಯೋಗ ನೀಡುವ ಕನಸು ಕಾಣಬೇಕು ಎಂದು ಹೇಳಿದರು.

ಲಘು ಉದ್ಯೋಗ ಭಾರತಿ ಸಂಸ್ಥೆಯ ರಾಜ್ಯಕಾರ್ಯದರ್ಶಿ ಪ್ರಕಾಶ್ ಯಾಜಿ ಮಾತನಾಡಿ, ಪ್ರತಿಯೊಬ್ಬರು ಸಣ್ಣ ಸಣ್ಣ ಉದ್ಯಮಗಳ ಸ್ಥಾಪನೆಗೆ ಪ್ರಯತ್ನಿಸಬೇಕು. ಕೇಂದ್ರ, ಸರ್ಕಾರ ಜಾರಿಗೆ ತಂದಿರುವ ಯೋಜನೆಗಳ ಲಾಭ ಅರ್ಹರು ಪಡೆಯಲು ಶ್ರಮಿಸಬೇಕು ಎಂದು ಸಲಹೆ ನೀಡಿದರು. ಸಂಸ್ಥೆಯು ಸೂಕ್ಷ್ಮ ಮತ್ತು ಸಣ್ಣ ಕೈಗಾರಿಕೆಗಳ ಬೆಳವಣಿಗೆ ಮತ್ತು ಅಭಿವೃದ್ಧಿಗೆ ಸೌಲಭ್ಯಗಳನ್ನು ಒದಗಿಸುವ ಗುರಿಯನ್ನು ಹೊಂದಿದೆ. ಇದು ಸೂಕ್ಷ್ಮ ಮತ್ತು ಸಣ್ಣ ಕೈಗಾರಿಕೆಗಳಿಗೆ ಪರಸ್ಪರ ಸಹಾಯ ಮಾಡಲು ಮತ್ತು ಅವರು ಎದುರಿಸುತ್ತಿರುವ ಸಮಸ್ಯೆಗಳನ್ನು ಪರಿಹರಿಸಲು ವೇದಿಕೆಯನ್ನು ನೀಡುತ್ತದೆ, ಇದು ದೇಶದ ಒಟ್ಟಾರೆ ಅಭಿವೃದ್ಧಿಯಲ್ಲಿ ಒಂದು ಪಾತ್ರವನ್ನು ವಹಿಸಲು ಉದ್ಯಮಿಗಳನ್ನು ಪ್ರೋತ್ಸಾಹಿಸುತ್ತದೆ. ಲಘು ಉದ್ಯೋಗ ಭಾರತಿಯು ಕೈಗಾರಿಕೆಗಳ ಸುಧಾರಣೆಗಾಗಿ ಹಲವಾರು ಕೆಲಸ ಮಾಡುತ್ತದೆ ಮತ್ತು ಮಾಲೀಕರು, ನಿರ್ವಹಣೆ, ಕೆಲಸಗಾರರು, ಗ್ರಾಹಕರು, ಪೂರೈಕೆದಾರರ, ಹಣಕಾಸುದಾರರು ಮತ್ತು ಎಲ್ಲಾ ಸರ್ಕಾರಿ ಸಂಸ್ಥೆಗಳ ನಡುವೆ ಆರೋಗ್ಯಕರ ಸಂಬಂಧವನ್ನು ಇರಿಸಿಕೊಳ್ಳಲು ತನ್ನ ಸದಸ್ಯರನ್ನು ಪ್ರೇರೇಪಿಸುತ್ತದೆ. ಜಿಲ್ಲೆಯಲ್ಲಿ ಸಂಸ್ಥೆ ಬೆಳವಣಿಗೆಗೆ ಸಹಕರಿಸಬೇಕು ಎಂದು ಮನವಿ ಮಾಡಿದರು.

# ಪಿಎಂಎವೈಯು ಪ್ರಚಾರಕ್ಕೆ ಸಂಸದರ ಸಲಹೆ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹೊಳೆನರಸೀಪುರ: ಪ್ರಧಾನ ಮಂತ್ರಿ ಆವಾಸ್ ಯೋಜನೆ ಅನುಷ್ಠಾನಗೊಳಿಸಲು ನಿವೇಶನ ಮತ್ತು ವಸತಿ ಹರಿತರನ್ನು ಗುರುತಿಸಬೇಕು ಎಂದು ಸಂಸದ ಶ್ರೇಯಸ್ ಪಟೇಲ್ ಅಧಿಕಾರಿಗಳಿಗೆ ಸೂಚಿಸಿದರು.

ಪಟ್ಟಣದ ಪುರಸಭಾ ಸಭಾಂಗಣದಲ್ಲಿ ಕೇಂದ್ರ ಸರ್ಕಾರದ ಪ್ರಧಾನ ಮಂತ್ರಿ ಆವಾಸ್ ಯೋಜನೆ ಅನುಷ್ಠಾನ ಕುರಿತ ಸಭೆಯಲ್ಲಿ ಮಾತನಾಡಿ, ಪ್ರತಿ ವಾರ್ಡ್‌ಗಳಿಗೆ ಪುರಸಭಾ ಸಿಬ್ಬಂದಿ ತೆರಳಬೇಕು. ನಿವೇಶನ ರಹಿತರು, ವಸತಿ ರಹಿತರು, ಜೋಪಡಿ ಮನೆಗಳ ನಿವಾಸಿಗರನ್ನು ಗುರುತಿಸಿ ಮೊಬೈಲ್ ಆಪ್ ನಲ್ಲಿ ವಿವರ ನೋಂದಾಯಿಸಬೇಕು. ಈಗಾಗಲೇ ಗ್ರಾಮೀಣ ಭಾಗದಲ್ಲಿ ಆಯಾ ಗ್ರಾಪಂಗಳಿಂದ ಸಮೀಕ್ಷೆ ನಡೆಸಲಾಗುತ್ತಿದೆ. ಪ್ರತಿ ತಾಲ್ಲೂಕಿನಲ್ಲೂ ವಸತಿ ರಹಿತರನ್ನು ಗುರುತಿಸುವ ಕಾರ್ಯ ಮೊದಲಿಗೆ ಆಗಬೇಕು. ನಮ್ಮ ಜಿಲ್ಲೆಯಲ್ಲಿ ಇಷ್ಟು ವಸತಿ ರಹಿತರು ಇದ್ದಾರೆ ಎಂಬ ಮಾಹಿತಿ ಕೇಂದ್ರ ಸರ್ಕಾರದ ಗಮನಕ್ಕೆ ತರುವ ಪ್ರಯತ್ನ



ಇದಾಗಿದೆ. ನಂತರದಲ್ಲಿ ಸಹಾಯಧನ ನೀಡುವ ಮೂಲಕ ವಸತಿ ಅನುಕೂಲತೆಗೆ ಯೋಜನೆಯಡಿ ಫಲಾನುಭವಿಗಳಿಗೆ ಅನುಕೂಲ ಮಾಡಿಕೊಡಲಾಗುವುದು ಎಂದರು. ಪ್ರಸ್ತುತ ಯೋಜನೆಯಡಿ ನಿವೇಶನ ರಹಿತರಿಗೆ 1.5 ಲಕ್ಷ ರೂ. ಪ್ರೋತ್ಸಾಹ ಧನ ನೀಡಲಾಗುತ್ತದೆ. 9 ಲಕ್ಷ ರೂ. ವರೆಗೆ ಸಾಲ ಸೌಲಭ್ಯ ನೀಡಲಾಗುವುದು.

ಪುರಸಭಾ ಸಿಬ್ಬಂದಿ ಮನೆಗಳಿಗೆ ಯೋಜನೆಯ ಸಂಪೂರ್ಣ ವಿವರ ಇರುವ ಕರಪತ್ರ ಬಿತ್ತರಿಸಬೇಕು. ಖುದ್ದಾಗಿ ವಸತಿ ರಹಿತರ ಮಾಹಿತಿಯನ್ನು ನೋಂದಾಯಿಸಿಕೊಳ್ಳಬೇಕು. ಕಸದ ಗಾಡಿಗಳಲ್ಲಿ ಧ್ವನಿ ಮೂಲಕ ಪ್ರಚಾರ ಮಾಡಬೇಕು. ಜುಲೈ 15 ರೊಳಗೆ ಪಟ್ಟಣ ವ್ಯಾಪ್ತಿಯ ಎಲ್ಲಾ ವಸತಿ ರಹಿತ ಮತ್ತು ನಿವೇಶನ ರಹಿತರ ಪಟ್ಟಿ ನೀಡುವಂತೆ ಸೂಚಿಸಿದರು.

ಪುರಸಭೆಗೆ ಶವ ಸಾಗಣೆಗೆ ಶಾಂತಿ ವಾಹನ ಇಲ್ಲ ಎಂಬ ಬೇಡಿಕೆ ಇದೆ. ದಾನಿಗಳ ರೂಪದಲ್ಲಿಯಾದರೂ ಅಥವಾ ನನ್ನ ಅನುದಾನದಲ್ಲಾದರೂ ಶಾಂತಿ ವಾಹನ ನೀಡಲಾಗುವುದು. ಸೂಕ್ತ ನಿರ್ವಹಣೆ ಮಾಡಿ ಎಂದರು.

ವಸತಿ ಯೋಜನೆಯ ನಿರ್ದೇಶಕ ತ್ಯಾಗರಾಜ್, ಸಿಎಲ್‌ಟಿಸಿ ಅಧಿಕಾರಿ ಸೌಮ್ಯ, ಮುಖ್ಯಾಧಿಕಾರಿ ಶಿವಶಂಕರ್, ಯೋಜನಾಧಿಕಾರಿ ರಮೇಶ್ ಹಾಗೂ ಇತರರಿದ್ದರು.

# ಸಂಚಾರಿ ಬಸ್‌ನಲ್ಲಿ ಹೃದಯ, ಕ್ಯಾನ್ಸರ್ ರೋಗ ಪರೀಕ್ಷೆ

ಚನ್ನರಾಯಪಟ್ಟಣ: ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ವೋಲ್ವೋ ಗ್ರೂಪ್ ಮತ್ತು ನಾರಾಯಣ ಹೆಲ್ತ್ ಸಹಯೋಗದೊಂದಿಗೆ ಸಂಚಾರಿ ಸಮುದಾಯ ಆರೋಗ್ಯ ಕೇಂದ್ರದ ಸುಸಜ್ಜಿತ ಬಸ್‌ನಲ್ಲಿ ಉಚಿತವಾಗಿ ಹೃದಯ ಮತ್ತು ಕ್ಯಾನ್ಸರ್ ಸಂಬಂಧ ಪರೀಕ್ಷೆ ನಡೆಸಲಾಯಿತು.

ಪಟ್ಟಣದ ಸರ್ಕಾರಿ ಸಾರ್ವಜನಿಕ ಆಸ್ಪತ್ರೆ ಆವರಣದಲ್ಲಿ ಶಾಸಕ ಸಿ.ಎನ್. ಬಾಲಕೃಷ್ಣ ಬಸ್‌ಗೆ ಚಾಲನೆ ನೀಡಿದರು. ಈ ವೇಳೆ ಮಾತನಾಡಿದ ಅವರು, ಅನಾರೋಗ್ಯ ಸಮಸ್ಯೆಗಳು ಜಿಲ್ಲೆಯಲ್ಲಿ ಹೆಚ್ಚುತ್ತಿದ್ದು ಸಾರ್ವಜನಿಕರು ಆತಂಕಕ್ಕೀಡಾಗಿದ್ದಾರೆ. ಸಾರ್ವಜನಿಕರ ಆರೋಗ್ಯದ ದೃಷ್ಟಿಯಿಂದ ಉಚಿತವಾಗಿ ಪರೀಕ್ಷೆ ನಡೆಸಲಾಗುತ್ತಿದೆ. ಜಿಲ್ಲೆಯಲ್ಲಿ ಆತಂಕಕಾರಿ ಬೆಳವಣಿಗೆಗಳು ಸಂಭವಿಸುತ್ತಿದ್ದು, ಆತಂಕಪಡುವ ಅವಶ್ಯಕತೆ ಇಲ್ಲ. ಅನೇಕ ಕಾರಣಗಳಿಂದ ಹೃದಯಾಘಾತ ಸಂಭವಿಸುತ್ತಿವೆ. ಹೃದಯಾಘಾತ ಸಂಭವಿಸಲು ಆಹಾರ ಪದ್ಧತಿ, ಜೀವನ ಶೈಲಿ, ವಂಶ ಪಾರಂಪರ್ಯ ಹೀಗೆ ಹತ್ತು ಹಲವು ಕಾರಣಗಳಿವೆ. ಕಾಲಕಾಲಕ್ಕೆ ಆರೋಗ್ಯ ತಪಾಸಣೆಯಿಂದ ಕಾಯಿಲೆಗಳನ್ನು ತಡೆಗಟ್ಟಬಹುದು ಎಂದರು.

ಕ್ಯಾನ್ಸರ್ ಮತ್ತು ಹೃದಯ ಸಂಬಂಧಿ ಕಾಯಿಲೆಗಳಿಂದ ಬಳಲುತ್ತಿರುವವರಿಗೆ ಎಲ್ಲಾ ಮಾದರಿಯ ಪರೀಕ್ಷೆಗಳನ್ನು ಮಾಡಬೇಕು. ನಂತರ ಫಲಿತಾಂಶದ ವರದಿಯಲ್ಲಿ ಏನಿದೆ ಅದರ ಪ್ರಕಾರ ಚಿಕಿತ್ಸೆ ಪಡೆಯಬಹುದು ಎಂದು ಹೇಳಿದರು.

ಆರೋಗ್ಯ ಶಿಬಿರದಲ್ಲಿ ಎಕ್ಸ್ ರೇ, ಇಸಿಜಿ, ಎಕೋ, ಬ್ರೆಸ್ಟ್ ಕ್ಯಾನ್ಸರ್ ಸ್ಕ್ರೀನಿಂಗ್ ಸೇರಿ ರಕ್ತ ಪರೀಕ್ಷೆಗಳ ಉಚಿತ ಸೇವೆಯನ್ನು ಸಾರ್ವಜನಿಕರಿಗೆ ಒದಗಿಸಲಾಯಿತು.

ನಾರಾಯಣ ಹೆಲ್ತ್‌ನ ವ್ಯವಸ್ಥಾಪಕ ದೇವರಾಜ ನಾಯಕ್ ಮಾತನಾಡಿ, ಹೃದಯ ಸಂಬಂಧಿ ಹಾಗೂ ಕ್ಯಾನ್ಸರ್ ಸಂಬಂಧ ಕಾಯಿಲೆಗಳಿಗೆ ಸ್ಕ್ರೀನಿಂಗ್ ಪರೀಕ್ಷೆ ಹಮ್ಮಿಕೊಳ್ಳಲಾಗಿದೆ. ಜಿಲ್ಲೆಯ 4 ತಾಲ್ಲೂಕುಗಳಲ್ಲಿ ಇದರ ಉಪಯೋಗವನ್ನು ಸಾರ್ವಜನಿಕರಿಗೆ ಒದಗಿಸಲಾಗಿದ್ದು, ಮುಂದಿನ ಹಂತಗಳಲ್ಲಿ ಹೋಬಳಿ ಕೇಂದ್ರಗಳಲ್ಲಿ ಸೇವೆ ನೀಡಲಾಗುವುದು ಎಂದರು.

# ಇತಿಹಾಸದಲ್ಲಿ ಈ ದಿನ

## ಜುಲೈ-11

1922: ಕೋಲ್ಕತ್ತಾದಲ್ಲಿ ಎಂಜಿನಿಯರಿಂಗ್ ಶಿಕ್ಷಣವನ್ನು ಉತ್ತೇಜಿಸುವ ನಿಟ್ಟಿನಲ್ಲಿ ಯಾದವ್‌ಪುರ ವಿಶ್ವವಿದ್ಯಾಲಯ ಸ್ಥಾಪನೆ.

1987: ವಿಶ್ವ ಜನಸಂಖ್ಯೆ 5 ಬಿಲಿಯನ್ ತಲುಪಿದ ದಿನ. ಈ ದಿನವನ್ನು ವಿಶ್ವ ಜನಸಂಖ್ಯೆ ದಿನ ಎಂದು ಘೋಷಿಸಲಾಯಿತು.

1302: ಫ್ಲ್ಯಾಂಡರ್ಸ್‌ನ ರೈತರ ಸೇನೆ, ಫ್ರೆಂಚ್ ಶಸ್ತ್ರದಳಗಳನ್ನು ಸೋಲಿಸಿತು.

1804: ಅಮೆರಿಕಾದ ಉಪಾಧ್ಯಕ್ಷ ಆರನ್ ಬುರ್ ತನ್ನ ಪ್ರತಿಸ್ಪರ್ಧಿ ಅಲೆಕ್ಸಾಂಡರ್ ಹ್ಯಾಮಿಲ್ಟನ್ ಅವರನ್ನು ದುಯೆಲ್‌ನಲ್ಲಿ ಹತ್ಯೆ ಮಾಡಿದರು.

1914: ಅಮೆರಿಕದ ಬೇಸ್‌ಬಾಲ್ ಆಟಗಾರ ಬೇಬ್ ರೂತ್ ಮೊದಲ ಬಾರಿಗೆ ಮೇಜರ್ ಲೀಗ್‌ನಲ್ಲಿ ಆಡಿದರು.

### ಜನನ

1274: ರಾಬರ್ಟ್ ದಿ ಬ್ರೂಸ್, ಸ್ಕಾಟ್ಲೆಂಡ್‌ನ ರಾಜ, ಇಂಗ್ಲೆಂಡಿನ ವಿರುದ್ಧ ಸ್ವಾತಂತ್ರ್ಯ ಹೋರಾಟ ನಡೆಸಿದ ನಾಯಕ.

1767 ಜಾನ್ ಕ್ವಿನ್ಸಿ ಅಡಮ್ಸ್, ಅಮೆರಿಕದ 6ನೇ ಅಧ್ಯಕ್ಷ.

1897: ರೋನಾಲ್ಡ್ ಜೋರ್ಜ್ ರೆಯಿನ್, ರಸಾಯನಶಾಸ್ತ್ರದಲ್ಲಿ ನೊಬೆಲ್ ವಿಜೇತ.

### ಮರಣ

1957: ಗಿಯುಸೆಪ್ಪೆ ಟೊಗ್ನಿ, ಇಟಾಲಿಯನ್ ಛಾಯಾಗ್ರಾಹಕ.

2008: ಮೀರಾ ಮಿಶ್ರಾ, ಹಿಂದುಸ್ತಾನಿ ಸಂಗೀತದ ಪ್ರಸಿದ್ಧ ಗಾಯಕಿ.

# ವಸತಿ ಶಾಲೆ ಶೀಘ್ರ ನೂತನ ಕಟ್ಟಡಕ್ಕೆ ಸ್ಥಳಾಂತರ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಆಲೂರು: ಕಿತ್ತೂರು ರಾಣಿ ಚನ್ನಮ್ಮ ವಸತಿ ಶಾಲೆಯನ್ನು ಅತೀ ಶೀಘ್ರದಲ್ಲಿ ನೂತನ ಕಟ್ಟಡಕ್ಕೆ ಸ್ಥಳಾಂತರಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ಶಾಸಕ ಸಿಮೆಂಟ್ ಮಂಜು ತಿಳಿಸಿದರು.

ಪಟ್ಟಣದಲ್ಲಿ ಖಾಸಗಿ ಕಟ್ಟಡದಲ್ಲಿ ನಡೆಯುತ್ತಿರುವ ಕಿತ್ತೂರು ರಾಣಿ ಚನ್ನಮ್ಮ ವಸತಿ ಶಾಲೆ ಮತ್ತು ನಿಲಯಕ್ಕೆ ಭೇಟಿ ನೀಡಿ ಅಡುಗೆ ಮನೆ, ದಾಸ್ತಾನು ಸಂಗ್ರಹ ಕೊಠಡಿ, ವಿದ್ಯಾರ್ಥಿನಿಯರು ಮಲಗುವ ಸ್ಥಳ, ಶೌಚಾಲಯ ಪರಿಶೀಲಿಸಿದ ನಂತರ ಸುದ್ದಿಗಾರರೊಂದಿಗೆ ಮಾತನಾಡಿ, ಸದ್ಯ ಬಾಡಿಗೆ ಕಟ್ಟಡದಲ್ಲಿ ಶಾಲೆ ಮತ್ತು ವಸತಿ ನಿಲಯ ನಡೆಯುತ್ತಿದೆ ಎಂದರು.

ಈಗ ನಡೆಯುತ್ತಿರುವ ಕಟ್ಟಡ ಸೋರುತ್ತಿರುವುದಲ್ಲದೆ ಅತ್ಯಂತ ಕ್ಲಿಷ್ಟಕರ ಪರಿಸ್ಥಿತಿಯಲ್ಲಿ ವಸತಿ



ನಿಲಯವಿದೆ. ವಿಪರೀತ ಶೀತ ಆವರಿಸಿದೆ. ಮಕ್ಕಳಿಗೆ ಶಿಕ್ಷಣದ ಜೊತೆಗೆ ಆರೋಗ್ಯವೂ ಪ್ರಮುಖ ಜವಾಬ್ದಾರಿ. ಪಾಳ್ಯ ಬಳಿ 24 ಕೋಟಿ ರೂ. ವೆಚ್ಚದಲ್ಲಿ 250 ಮಕ್ಕಳಿಗೆ ಅನುಕೂಲವಾಗುವಂತೆ ನೂತನ ಕಟ್ಟಡ ನಿರ್ಮಾಣ ಮಾಡಲಾಗುತ್ತಿದೆ. ನೂತನ ಕಟ್ಟಡವನ್ನು ಈಗಾಗಲೇ ವೀಕ್ಷಿಸಿದ್ದೇನೆ. ಕಟ್ಟಡದ ಕಾಮಗಾರಿ ಬಹುತೇಕ ಮುಗಿಯುವ ಹಂತದಲ್ಲಿದೆ. ವಿದ್ಯಾರ್ಥಿನಿಯರಿಗೆ ಆಟದ ಮೈದಾನ ಅತ್ಯಂತ ಅವಶ್ಯಕವಾಗಿದೆ ಎಂದರು.

ಜಿಲ್ಲಾ ಶಿಕ್ಷಣ ಉಪ ನಿರ್ದೇಶಕರು ಮತ್ತು ತಹಶೀಲ್ದಾರ್ ಅವರೊಂದಿಗೆ ಸ್ಥಳಕ್ಕೆ ಭೇಟಿ ನೀಡಿ, ಕಟ್ಟಡಕ್ಕೆ ಹೊಂದಿಕೊಂಡಂತೆ ಆಟದ ಮೈದಾನಕ್ಕೆ ಸ್ಥಳಾವಕಾಶ ಮಾಡುವ ಪ್ರಯತ್ನ ಮಾಡುತ್ತೇನೆ. ಅತಿ ಶೀಘ್ರದಲ್ಲಿ ನೂತನ ಕಟ್ಟಡ ಉದ್ಘಾಟನೆ ಮಾಡಲಾಗುತ್ತದೆ ಎಂದರು.

ವಸತಿ ನಿಲಯದಲ್ಲಿ ತಯಾರಿಸಿದ್ದ ಊಟದ ರುಚಿಯನ್ನು ಶಾಸಕರು ಸವಿದು ತೃಪ್ತರಾದರು. ಅಡುಗೆಗೆ ಬಳಸುವ ಗ್ಯಾಸ್ ಸಿಲಿಂಡರ್‌ಗಳು ಕಟ್ಟಡದೊಳಗಿರುವುದನ್ನು ಗಮನಿಸಿದ ಶಾಸಕರು, ಕೂಡಲೆ ಗ್ಯಾಸ್ ಸಿಲಿಂಡರ್ ಗಳನ್ನು ಕಟ್ಟಡದ ಹೊರಗೆ ಇಟ್ಟು, ಅಲ್ಲಿಂದ ಅಡುಗೆ ಮನೆಗೆ ಸಂಪರ್ಕ ಮಾಡಿಕೊಳ್ಳಬೇಕು. ಕಟ್ಟಡದ ಒಳಗಿರುವುದು ಅಪಾಯಕರ ಎಂದು ಪ್ರಾಂಶುಪಾಲರಿಗೆ ಸೂಚಿಸಿದರು.

ಪ್ರಾಂಶುಪಾಲರಾದ ಶ್ವೇತ ಅವರು ವಿದ್ಯಾರ್ಥಿ ನಿಲಯದಲ್ಲಿ ಆಗುತ್ತಿರುವ ಸಮಸ್ಯೆಗಳ ಬಗ್ಗೆ ವಿವರಿಸಿದರು. ನೂತನ ಕಟ್ಟಡದಲ್ಲಿ ವಿದ್ಯಾರ್ಥಿಗಳಿಗೆ ಮೂಲಭೂತ ಸೌಕರ್ಯಗಳೊಂದಿಗೆ ಶೌಚಾಲಯ, ಸುಸಜ್ಜಿತ ಮಂಚ, ಹಾಸಿಗೆ, ದಿಂಬು, ಸೊಳ್ಳೆ ಪರದೆ ಸೇರಿ ಎಲ್ಲಾ ಸೌಕರ್ಯ ಒದಗಿಸಲಾಗಿದೆ. ಅತಿ ಶೀಘ್ರದಲ್ಲಿ ಸ್ಥಳಾಂತರಗೊಳಿಸಬೇಕು ಎಂದು ಮನವಿ ಮಾಡಿದರು.

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201 and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248